# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 | ಸಂಚಿಕೆ – 199 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 23–02–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00

Volume - 01 | Issue - 199 | Title- Code: KARKAN 28269 | Chitradurga | Date: 23-02-2024 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಮತಗಟ್ಟೆಗಳಿಗೆ ಖುದ್ದು ಭೇಟಿ ನೀಡಿ ವಸ್ತುಸ್ಥಿತಿ ಕುರಿತು ವರದಿ ಸಲ್ಲಿಸಿ 2

ನಾಯಕನಹಟ್ಟಿ ತಿಪ್ಪೇರುದ್ರಸ್ವಾಮಿ ಜಾತ್ರೆ: 24 ರಂದು ಪೂರ್ವ ಭಾವಿ ಸಭೆ 3

ಬಿಸಿಲಿನ ಜಳಕ್ಕೆ ನೀರು, ನೆರಳಿನ ದಾಹ– ಎದುರಿದ ಮೂಕ ಪ್ರಾಣಿಗಳು 4


ಸುದ್ದಿ, ಜಾಹಿರಾತಿಗೆ 9686622252

**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಪೌಷ್ಠಿಕಾಂಶ ಉತ್ತಮ ಶಿಕ್ಷಣಕ್ಕೆ ರಹದಾರಿ

## 55 ಲಕ್ಷ ಸರ್ಕಾರಿ ಶಾಲೆ ಮಕ್ಕಳ ಮಾನಸಿಕ ದೈಹಿಕ ಆರೋಗ್ಯಕ್ಕಾಗಿ ರಾಗಿ ಮಾಲ್ಟ್ ವಿತರಣೆ







» **ಬೆಂಗಳೂರು**

55 ಲಕ್ಷ ಸರ್ಕಾರಿ ಶಾಲೆ ಮಕ್ಕಳ ಮಾನಸಿಕ ದೈಹಿಕ ಆರೋಗ್ಯಕ್ಕಾಗಿ ರಾಗಿ ಮಾಲ್ಟ್ ವಿತರಣೆ ಮಾಡಲು ಶುರು ಮಾಡಿದ್ದೇವೆ. ಉತ್ತಮ ಪೌಷ್ಠಿಕಾಂಶ ಉತ್ತಮ ಶಿಕ್ಷಣಕ್ಕೆ ರಹದಾರಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದರು.

ಬ್ಯಾಂಕ್ವೆಟ್ ಹಾಲ್ ನಲ್ಲಿ ನಡೆದ ಸಾಯಿ ಶ್ಯೂರ್ ರಾಗಿ ಹೆಲ್ತ್ ಮಿಕ್ಸ್ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. 2013 ರಲ್ಲಿ ನಮ್ಮ ಸರ್ಕಾರ ಬಂದಾಗ ನಮ್ಮಲ್ಲಿ ಹಾಲು ಉತ್ಪಾದನೆ ಹೆಚ್ಚಾಯಿತು. ಈ ಹೆಚ್ಚುವರಿ ಹಾಲಿನ ಮಾರಾಟ ಮತ್ತು ಹಾಲಿನ ಉಪ ಉತ್ಪನ್ನಗಳನ್ನೂ ಹೆಚ್ಚುವರಿಯಾಗಿ ಉತ್ಪಾದನೆ ಮಾಡಲು ಸಾಧ್ಯವಿರಲಿಲ್ಲ.

ಹೀಗಾಗಿ ಆ ಕೂಡಲೇ ಸರ್ಕಾರಿ ಶಾಲಾ ಮಕ್ಕಳಿಗೆ ವಾರದಲ್ಲಿ ಐದು ದಿನ ಹಾಲು ಕೊಡುವ ಕ್ಷೀರಭಾಗ್ಯ ಯೋಜನೆಯನ್ನು ಆರಂಭಿಸಿದೆ. ಏಒಈ ಮೂಲಕ ಮಕ್ಕಳಿಗೆ ಹಾಲು ಹೋಗುತ್ತದೆ. ಈ ಹಾಲಿನ ಹಣವನ್ನು ಸರ್ಕಾರ ಏಒಈ ಗೆ ನೀಡುತ್ತದೆ. ಆ ಮೂಲಕ ಏಒಈ ಗೆ ಹಾಲು ಸರಬರಾಜು ಮಾಡುವ ರೈತರಿಗೆ ನೆರವಾಗುವ ತೀರ್ಮಾನ ಮಾಡಿದೆವು. ಇದರ ಜತೆಗೆ ಕಳೆದ ಬಜೆಟ್ ನಲ್ಲಿ ಶಾಲಾ ಮಕ್ಕಳಿಗೆ ವಾರಕ್ಕೆ ಎರಡು ದಿನ ಮೊಟ್ಟೆ ಕೊಡುವ ಕಾರ್ಯಕ್ರಮ ಶುರು ಮಾಡಿದೆವು ಎಂದು ವಿವರಿಸಿದರು. ಈಗ ಅತ್ಯಂತ ಪೌಷ್ಠಿಕವಾದ ರಾಗಿ ಮಾಲ್ಟ್ ಕೊಡುವ ಕಾರ್ಯಕ್ರಮ ಶುರುವಾಗಿದೆ. ಇದರಿಂದ ಮಕ್ಕಳ ಮಾನಸಿಕ ಮತ್ತು ದೈಹಿಕ ಆರೋಗ್ಯ ವೃದ್ಧಿಯಾಗುತ್ತದೆ. ಮಕ್ಕಳಿಗೆ ರಕ್ತಹೀನತೆ ಬರಲೇಬಾರದು. ಪೌಷ್ಠಿಕಾಂಶ ಕೊರತೆ ಆಗಲೇ ಬಾರದು. ಆಗ ಮಾತ್ರ ಮಕ್ಕಳು ಮಾನಸಿಕವಾಗಿ ಸದೃಡವಾಗಿ ಓದಿನಲ್ಲಿ ಹೆಚ್ಚು ಚುರುಕಾಗುತ್ತಾರೆ. ಗುಣಮಟ್ಟದ ಶಿಕ್ಷಣ ಪಡೆದುಕೊಳ್ಳುತ್ತಾರೆ. ಶ್ರೀಮಂತರ ಮಕ್ಕಳ ರೀತಿ ಬಡವರು, ಶ್ರಮಿಕರು, ದಲಿತ, ಶೂದ್ರರ ಮಕ್ಕಳಿಗೂ ಉತ್ತಮ ಶಿಕ್ಷಣ ದೊರೆಯಬೇಕು. ಏಕೆಂದರೆ ಮಕ್ಕಳೇ ದೇಶದ, ಸಮಾಜದ ಭವಿಷ್ಯವನ್ನು ರೂಪಿಸುತ್ತಾರೆ ಎನ್ನುತ್ತಾ ಬುದ್ಧ, ಬಸವ, ಅಂಬೇಡ್ಕರ್ ಮಾತುಗಳನ್ನು ಉಲ್ಲೇಖಿಸಿದರು. ಶಿಕ್ಷಣದಿಂದ ಮಾತ್ರ ಸ್ವಾಭಿಮಾನ ಹೆಚ್ಚಾಗಲು ಸಾಧ್ಯ. ಜ್ಞಾನದ ಬೆಳವಣಿಗೆ ಶಿಕ್ಷಣದಿಂದ ಸಾಧ್ಯ. ಶಿಕ್ಷಣ ಅಂದರೆ ಕೇವಲ ಓದು, ಬರಹ ಕಲಿಸುವುದಲ್ಲ. ಸಮಾಜದ ಸಮಸ್ಯೆಗಳಿಗೆ ಸ್ಪಂದಿಸುವ ವೈಚಾರಿಕತೆಯುಳ್ಳ ಶಿಕ್ಷಣ ಅಗತ್ಯ. ಉನ್ನತ ಶಿಕ್ಷಣ ಪಡೆದ ವೈದ್ಯರು, ಎಂಜಿನಿಯರ್ ಗಳೂ ಈಗ ಮೌಢ್ಯಕ್ಕೆ ಜೋತು ಬಿದ್ದಿದ್ದಾರೆ. ಬಸವಾದಿ ಶರಣರು ಮೌಢ್ಯಮುಕ್ತ ಸಮಾಜ ನಿರ್ಮಾಣಕ್ಕೆ ಶ್ರಮಿಸಿದ್ದರು. ವೈಚಾರಿಕ ಶಿಕ್ಷಣದಿಂದ ಮಾತ್ರ ಮೌಢ್ಯಮುಕ್ತ ಸಮಾಜ ನಿರ್ಮಾಣವಾಗಲು ಸಾಧ್ಯ ಎಂದರು.

2023–24ನೇ ಶೈಕ್ಷಣಿಕ ವರ್ಷದಿಂದ ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಶಾಲಾ ಮಕ್ಕಳಿಗೆ ಬಹುಪೌಷ್ಠಿಕಾಂಶವುಳ್ಳ ಸಾಯಿ ಶ್ಯೂರ್ ರಾಗಿ ಮಾಲ್ಟ್ ಹೆಲ್ತ್ ಮಿಕ್ಸ್ ವಿತರಿಸುವ ಕಾರ್ಯಕ್ರಮದಲ್ಲಿ ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ, ಶಿಕ್ಷಣ ಸಚಿವ ಮಧು ಬಂಗಾರಪ್ಪ ಸೇರಿ ಇಲಾಖಾ ಅಧಿಕಾರಿಗಳು ಉಪಸ್ಥಿತರಿದ್ದರು.

## ನಾವು 20 ಲೋಕಸಭಾ ಸ್ಥಾನ ಗೆಲ್ಲುವುದು ಖಚಿತ: ಸಿಎಂ

### ಭಿನ್ನಾಭಿಪ್ರಾಯಗಳನ್ನು ಮರೆತು ಗೆಲ್ಲಲೇಬೇಕು ಎಂಬ ಛಲದಿಂದ ಕೆಲಸ ಮಾಡಬೇಕು

» **ಬೆಂಗಳೂರು**

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಕನಿಷ್ಠ 20 ಸ್ಥಾನಗಳನ್ನು ಈ ಬಾರಿ ಗೆದ್ದೇ ಗೆಲ್ಲುತ್ತೇವೆ. ಯಾರು ಏನೇ ಹೇಳಿದರೂ ನಾವು ನೂರಕ್ಕೆ ನೂರು ಗೆಲ್ಲುತ್ತೇವೆ. ಒಗ್ಗಟ್ಟಿನಿಂದ ಸಣ್ಣ ಪುಟ್ಟ ಭಿನ್ನಾಭಿಪ್ರಾಯಗಳಿದ್ದರೆ ಅದನ್ನು ಮರೆತು ಗೆಲ್ಲಲೇಬೇಕು ಎಂಬ ಛಲ ದಿಂದ ಕೆಲಸ ಮಾಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು. ಅವರು ಇಂದು ಕೆ.ಪಿ.ಸಿ.ಸಿ. ಕಛೇರಿಯಲ್ಲಿ ಮುದ್ದಹಮುಮೇಗೌಡ ಅವರ ಕಾಂಗ್ರೆಸ್ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.ಮುದ್ದುಹನುಮೇ ಗೌಡರು ಮೂಲತಃ ಕಾಂಗ್ರೆಸ್ ನವರು. ಕಳೆದ ವಿಧಾನಸಭೆಗೂ ಮುನ್ನ ಕಾಂಗ್ರೆಸ್ ತೊರೆದು ಬಿಜೆಪಿ ಸೇರಿದ್ದರು. ಅವರ ತಪ್ಪಿನ ಅರಿವಾಗಿ ಕಾಂಗ್ರೆಸ್ ಪಕ್ಷಕ್ಕೆ ಮರಳಿ ಸೇರ್ಪಡೆಯಾಗಿದ್ದಾರೆ. ತಪ್ಪು ಮಾಡಿದ್ದೇನೆ, ಕ್ಷಮೆ ಇರಲಿ ಎಂದು ಅವರು ಹೇಳಿದ್ದಾರೆ. ತಪ್ಪು ಮಾಡಿದ ಮೇಲೆ ಪಶ್ಚಾತ್ತಾಪ ಮುಖ್ಯ. ಪಶ್ಚಾತ್ತಾಪಕ್ಕಿಂತ ದೊಡ್ಡ ಶಿಕ್ಷೆ ಮತ್ತೊಂದಿಲ್ಲ. ಪಕ್ಷಕ್ಕೆ ಯಾರೇ ಬಂದರೂ, ಬೇರೆ ನಮ್ಮ ಪಕ್ಷದವರನ್ನೂ ನಮ್ಮ ಪಕ್ಷಕ್ಕೆ ಸೇರಿಸಿಕೊಳ್ಳುತ್ತೇವೆ ಎಂದು ಪಕ್ಷದ ಅಧ್ಯಕ್ಷರು ಹೇಳಿದ್ದಾರೆ. ಎಲ್ಲಾ ಜಿಲ್ಲೆಯ ಮುಖಂಡರೆಲ್ಲರೂ ಸೇರಿ ಅವರನ್ನು ಸೇರಿಸಿಕೊಳ್ಳಲು ಒಪ್ಪಿದ್ದಾರೆ ಎಂದರು.

**ಒಳ್ಳೆಯ ವಾತಾವರಣ:** ಮುಂದಿನ ಲೋಕಸಭಾ ಚುನಾವಣೆಯಲ್ಲಿ ಜಿಲ್ಲೆಯವರು ಯಾರನ್ನು ಸೂಚಿಸುತ್ತಾರೋ ಅವರನ್ನೇ ಅಭ್ಯರ್ಥಿ ಮಾಡುತ್ತೇವೆ. ತುಮಕೂರು ಜಿಲ್ಲೆಯಲ್ಲಿ ಗೆಲ್ಲಲು ಅವಕಾಶವಿದೆ. ಒಳ್ಳೆಯ ವಾತಾವರಣವಿದೆ. ಸರ್ಕಾರ ಕೂಡ ನಾವು ಜನಪರವಾದ ಕೆಲಸಗಳನ್ನು ಮಾಡಿದೆ. ಐದು ಗ್ಯಾರಂಟಿಗಳನ್ನು ನುಡಿದಂತೆ ಜಾರಿ ಮಾಡಿದೆ. ಮಾತನ್ನು ಉಳಿಸಿಕೊಂಡಿದ್ದೇವೆ. ಆದ್ದರಿಂದ ಇಡೀ ರಾಜ್ಯದಲ್ಲಿ ಒಳ್ಳೆಯ ವಾತಾವರಣವಿದೆ ಎಂದರು.

**ನಮ್ಮ ಕೆಲಸಗಳ ಬಗ್ಗೆ ಜನರಿಗೆ ಸಮಾಧಾನವಿದೆ:** ಇತ್ತೀಚೆಗೆ ವಿವಿದೆಡೆ ಹಮ್ಮಿಕೊಂಡಿದ್ದ ಸೌಲಭ್ಯ ವಿತರಾಣಾ ಕಾರ್ಯಕ್ರಮದಲ್ಲಿ ಬಹಳ ಜನ ಸೇರಿದ್ದರು. ಜನ ಸುಮ್ಮನೆ ಸೇರುವುದಿಲ್ಲ. ಜನರಿಗೆ ನಾವು ಮಾಡಿರುವ ಕೆಲಸಗಳ ಬಗ್ಗೆ ಸಮಾಧಾನ ಇದೆ. ಆ ಸಮಾಧಾನ ಇರುವುದರಿಂದಲೇ ಎಲ್ಲೇ ಸಭೆಗಳನ್ನು ಆಯೋಜಿಸಿದರೂ ಜನ ಸೇರಿದ್ದರು. ಮಂಗಳೂರು, ಮಳ ವಳ್ಳಿಯಲ್ಲಿಯೂ ಬೃಹತ್ ಸಂಖ್ಯೆಯಲ್ಲಿ ಜನ ಸೇರಿದ್ದರು.

ಮುದ್ದುಹನುಮೇ ಗೌಡರನ್ನು ಪಕ್ಷಕ್ಕೆ ಹಾರ್ದಿಕವಾಗಿ ಸ್ವಾಗತಿಸುತ್ತೇನೆ ಎಂದು ಹೇಳಿದರು.

**ಫಾಸ್ಟ್ ನ್ಯೂಸ್**

## ಭಾರ್ಗವಿ ದ್ರಾವಿಡ್ ಬಿಜೆಪಿ ರಾಜ್ಯ ಯುವ ಮೋರ್ಚಾ ಕಾರ್ಯದರ್ಶಿಯಾಗಿ ನೇಮಕ

» **ಚಿತ್ರದುರ್ಗ**



ರಾಜ್ಯ ಬಿಜೆಯಲ್ಲಿ ಮಾಜಿ ಸಿಎಂ ಯಡಿಯೂರಪ್ಪ ಪುತ್ರ ವಿಜಯೇಂದ್ರ ಅವರು ರಾಜ್ಯ ಬಿಜೆಪಿ ಅಧ್ಯಕ್ಷರಾದ ಮೇಲೆ ಯುವ ಸಮೂಹಕ್ಕೆ ಮಣೆ ಹಾಕುವ ಜೊತೆ ಸಂಘಟನೆ ಒತ್ತು ನೀಡುತ್ತಿದ್ದಾರೆ. ಅದರಂತೆ ಇಂದು ಚಿತ್ರದುರ್ಗದ ಹಲವು ಹೋರಟಗಳಲ್ಲಿ ಮುಂಚೂಣಿ ನಾಯಕಿಯಾಗಿದ್ದ ಯುವ ನಾಯಕಿ ಭಾರ್ಗವಿ ದ್ರಾವಿಡ್ ಅವರನ್ನು ಬಿಜೆಪಿ ಯುವ ಮೋರ್ಚಾ ರಾಜ್ಯ ಕಾರ್ಯದರ್ಶಿಯಾಗಿ ನೇಮಕ ಆದೇಶ ಹೊರಡಿಸಿದೆ. ಇಂದು ಜ ಬೆಂಗಳೂರಿನ ಜೆಪಿ ನಗರದ ಬಿಜೆಪಿ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಭಾರ್ಗವಿ ಅವರನ್ನು ಆಯ್ಕೆ ಮಾಡಲಾಗಿದೆ. ಬಿಜೆಪಿ ಯುವ ಮೋರ್ಚಾ ರಾಜ್ಯ ಅಧ್ಯಕ್ಷ ಧೀರಜ್ ಮುನಿರಾಜ್ ಅವರು ಆದೇಶ ಮಾಡಿದ್ದರು. ಈ ನೇಮಕಗೊಂಡ ಪತ್ರವನ್ನು ಯುವ ಮೋರ್ಚಾ ರಾಷ್ಟ್ರೀಯ ಅಧ್ಯಕ್ಷ ಹಾಗೂ ಸಂಸದ ತೇಜಸ್ವಿ ಸೂರ್ಯ ಭಾರ್ಗವಿ ದ್ರಾವಿಡ್ ಅವರಿಗೆ ನೀಡಿದ್ದಾರೆ. ಚಿತ್ರದುರ್ಗ ಜಿಲ್ಲೆಯಲ್ಲಿ ಯುವಕರ ಜೊತೆ ಅನೇಕ ಹೋರಟಗಳಲ್ಲಿ ಬಿಜೆಪಿ ಪಕ್ಷದ ಪರವಾಗಿ ಕೆಲಸ ಮಾಡಿದ್ದರು. ಈ ಹಿಂದೆ ಭಾರತ ಸರ್ಕಾರವು ಚಿತ್ರದುರ್ಗ ನೆಹರು ಯುವ ಕೇಂದ್ರದ ಸಲಹಾ ಸಮಿತಿಯ ಸದಸ್ಯರಾಗಿ ನೇಮಕ ಮಾಡಿತ್ತು. ಹಾಗೂ ದಾವಣಗೆರೆ ವಿಶ್ವ ವಿದ್ಯಾನಿಲಯದಲ್ಲಿ ವಿದ್ಯಾವಿಷಯಕ ಪರಿಷತ್ತಿನ ಸದಸ್ಯರಾಗಿ ರಾಜ್ಯ ಸರ್ಕಾರ ನಾಮ ನಿರ್ದೇಶನ ಮಾಡಲಾಗಿತ್ತು. ಎಸ್.ಸಿ.ಮೋರ್ಚಾದ ರಾಜ್ಯ ಕಾರ್ಯ ಕಾರಿಣಿ ಸದಸ್ಯರಾಗಿ ಪ್ರವಾಸ ಕೈಗೊಂಡು ಕೆಲಸ ಮಾಡಿದ್ದರು. ಎಬಿವಿಪಿ ಕಾರ್ಯಕರ್ತೆಯಾಗಿ ಜಿಲ್ಲೆ, ರಾಜ್ಯ ಮಟ್ಟದ ಜವಾಬ್ದಾರಿ ನಿರ್ವಹಿಸಿದ್ದ ಯಶಸ್ವಿಯಾಗಿ ಕಾರ್ಯ ನಿರ್ವಹಿಸಿದ್ದರು.

## ಮಾರ್ಚ್ 9ರ ನಂತರ ಲೋಕಸಭೆ ಚುನಾವಣೆ ಘೋಷಣೆ ಸಾಧ್ಯತೆ

» **ನವದೆಹಲಿ**

ಲೋಕಸಭಾ ಚುನಾವಣೆಗೆ ದೇಶವೇ ಸಿದ್ಧವಾಗುತ್ತಿದ್ದು, ರಾಜಕೀಯ ಪಕ್ಷಗಳು ಈಗಾಗಲೇ ಸೋಲು–ಗೆಲುವಿನ ಲೆಕ್ಕಾಚಾರಸಲ್ಲಿ ತೊಡಗಿಕೊಂಡಿವೆ. ಬಹುತೇಕ ಪಕ್ಷಗಳು ತಮ್ಮ ಅಭ್ಯರ್ಥಿಗಳನ್ನು ಈಗಾಗಲೇ ಫೈನಲ್ ಮಾಡಿಕೊಂಡಿದ್ದಾರೆ. ಆದರೆ, ಅಧಿಕೃತವಾಗಿ ಘೋಷಣೆ ಮಾಡುವುದು ಬಾಕಿಯಿದೆ. ಇನ್ನು, ಮಾರ್ಚ್ 9 ರ ನಂತರ ಲೋಕಸಭಾ ಚುನಾವಣೆಯ ದಿನಾಂಕವನ್ನು ಭಾರತೀಯ ಚುನಾವಣಾ ಆಯೋಗ (ಇಸಿಐ) ಘೋಷಿಸುವ ಸಾಧ್ಯತೆಯಿದೆ ಎಂದು ಮೂಲಗಳನ್ನು ಉಲ್ಲೇಖಿಸಿ ನಮ್ಮ ಜನ ಪತ್ರಿಕೆ ವರದಿ ಮಾಡಿದೆ. ಚುನಾವಣಾ ಸಮಿತಿಯು ಅಂತಿಮ ಪರಿಶೀಲನೆಗಾಗಿ ರಾಜ್ಯಗಳಿಗೆ ತೆರಳುತ್ತಿದೆ ಎಂದು ವರದಿಯಾಗಿದೆ.2024 ರ ಲೋಕಸಭಾ ಚುನಾವಣಾ ದಿನಾಂಕಗಳು ಕೂಡ 2019ರ ಚುನಾವಣೆಯಂತೇಯೇ ಇರಬಹುದು ಎಂದು ವರದಿಯು ಸೇರಿಸಿದೆ. ಹಿಂದಿನ ಸಾರ್ವತ್ರಿಕ ಚುನಾವಣೆಗಳಲ್ಲಿ, ದಿನಾಂಕಗಳನ್ನು ಮಾರ್ಚ್ 10, 2019 ರಂದು ಘೋಷಿಸಲಾಗಿತ್ತು. ಏಪ್ರಿಲ್ 11 ರಿಂದ ಮೇ 19ರ ನಡುವೆ ಏಳು ಹಂತಗಳಲ್ಲಿ ಮತದಾನ ನಡೆಸಲಾಗಿತ್ತು.ದೇಶವು ಲೋಕಸಭೆ ಚುನಾವಣೆ ಮತ್ತು ಕೆಲವು ರಾಜ್ಯಗಳ ವಿಧಾನಸಭೆ ಚುನಾವಣೆಗೆ ಸಜ್ಜಾಗುತ್ತಿರುವಾಗ, ಭಾರತೀಯ ಚುನಾವಣಾ ಆಯೋಗದ ಅಧಿಕಾರಿಗಳ ತಂಡ ಈ ದಿನಗಳಲ್ಲಿ ರಾಜ್ಯಗಳಿಗೆ ಬ್ಯಾಕ್ ಟು ಬ್ಯಾಕ್ ಭೇಟಿ ನಡೆಸುತ್ತಿದೆ. ಜಮ್ಮು ಮತ್ತು ಕಾಶ್ಮೀರ ಭದ್ರತಾ ಪರಿಸ್ಥಿತಿ ಮತ್ತು ಪಡೆಗಳ ಲಭ್ಯತೆಯ ಬಗ್ಗೆ ಪರಿಶೀಲಿಸಲು ಆಯೋಗದ ಪ್ರತಿನಿಧಿಗಳು ಮಾರ್ಚ್ 8 ಮತ್ತು 9 ರಂದು ಸರ್ಕಾರಿ ಅಧಿಕಾರಿಗಳನ್ನು ಭೇಟಿ ಮಾಡುವ ನಿರೀಕ್ಷೆಯಿದೆ.

ಪುಟ 2

## ಅಭಿವೃದ್ಧಿ ಹೊಂದಿದ ರಾಜ್ಯವೆಂದರೆ ಕರ್ನಾಟಕ

» **ಶಿವಮೊಗ್ಗ**



ಅಭಿವೃದ್ಧಿ ಹೊಂದಿದ ರಾಜ್ಯವೆಂದರೆ ಕರ್ನಾಟಕ ಎಂದು ನಿತಿನ್ ಗಡ್ಕರಿ ಶ್ಲಾಘನೆ ವ್ಯಕ್ತಪಡಿಸಿದ್ದಾರೆ. ದೇಶದಲ್ಲಿ ಅತ್ಯುತ್ತಮ ನಾಡಗೀತೆ ಕರ್ನಾಟಕ ರಾಜ್ಯದಾಗಿದೆ. ಈ ಹಾಡು ಕೇಳಿ ನನಗೆ ತುಂಬಾ ಖುಷಿ ಆಯ್ತು. ಈ ಹಾಡು ರಚನೆ ಮಾಡಿದವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ಹೇಳಿದ್ದಾರೆ.ರಾಜ್ಯದಲ್ಲಿ ಸಕ್ಕರೆ ಕಾರ್ಖಾನೆಗಳಿವೆ. 2014 ರಿಂದ ಕಾರ್ಖಾನೆಯಲ್ಲಿ ವಿದ್ಯುತ್ ಮತ್ತು ಇಂಧನ ಉತ್ಪಾದನೆಗೆ ಬಳಕೆ ಮಾಡಲಾಗಿದೆ. ಭತ್ತದ ಹೊಟ್ಟಿನ ಮೂಲಕ ವಿಮಾನದ ಇಂಧನ ಉತ್ಪಾದನೆ. ಏಥಿನಾಲ್ ಇಂಧನ ಬೇಕು. ಏಥಾನಾಲ್‌ನ 400 ಪಂಪ್‌ಗಳು ದೇಶದಲ್ಲಿ ಓಪನ್ ಆಗಲಿದೆ. ಇದಕ್ಕೆ ರಾಜ್ಯ ಸರ್ಕಾರಗಳು ಸಾಥ್ ನೀಡಬೇಕಿದೆ. ಇದರಿಂದ ಗ್ರಾಮೀಣ ಅಭಿವೃದ್ಧಿ ಮತ್ತು ಸ್ಮಾರ್ಟ್ ಆಗಲಿದೆ ಎಂದು ತಿಳಿಸಿದರು. ಅಮೇರಿಕ ಹೈವೇ ಮಾದರಿಯಲ್ಲಿ ರಾಜ್ಯದ ಹೈವೇಗಳು 2028 ರಲ್ಲಿ ಪೂರ್ಣ ಅಭಿವೃದ್ಧಿ ಆಗಲಿದೆ. ತುಮಕೂರು–ಶಿವಮೊಗ್ಗ ಹೈವೇ 6,500 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿ ನಡೆಯುತ್ತಿದೆ.

## ಬಿಜೆಪಿ, ದಳ ಸೀಟು ಹಂಚಿಕೆ ಫೈನಲ್?

» **ಬೆಂಗಳೂರು**



ಲೋಕಸಮರಕ್ಕೆ ಇನ್ನು ಕೆಲವೇ ತಿಂಗಳುಗಳು ಬಾಕಿ ಇದೆ. ಕಳೆದ ಸೆಪ್ಟೆಂಬರ್ ತಿಂಗಳಲ್ಲಿ ಲೋಕಸಭೆ ಚುನಾವಣೆಗೆ ಮೈತ್ರಿಯನ್ನು ಘೋಷಿಸಿದ ಬಿಜೆಪಿ ಮತ್ತು ಜೆಡಿಎಸ್, ಸೀಟು ಹಂಚಿಕೆಯ ತೀರ್ಮಾನವನ್ನು ಅಂತಿಮಗೊಳಿಸುವ ಹಂತದಲ್ಲಿದೆ. ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ ತಮ್ಮ ಪುತ್ರ ನಿಖಿಲ್ ಜತೆ ದೆಹಲಿಗೆ ಭೇಟಿ ನೀಡಿ, ಕೇಂದ್ರ ಗೃಹಸಚಿವ ಅಮಿತ್ ಷಾ ಜತೆ ಸೀಟು ಹಂಚಿಕೆ ವಿಚಾರವಾಗಿ ಚರ್ಚೆ ನಡೆಸಿದ್ದಾರೆ.

ಪುಟ 2

**ಪ್ರಮುಖ ಸುದ್ದಿ**

### ತರಬೇತಿ ಕಾರ್ಯಾಗಾರದಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್

# ನ್ಯಾಯಸಮ್ಮತ ಚುನಾವಣೆಗೆ ಮಾಧ್ಯಮಗಳ ಸಹಕಾರ ಅಗತ್ಯ

» **ಚಿತ್ರದುರ್ಗ**



ಮುಂಬರುವ ಲೋಕಸಭಾ ಸಾರ್ವತ್ರಿಕ ಚುನಾವಣೆಯನ್ನು ಮುಕ್ತ ಹಾಗೂ ನ್ಯಾಯಸಮ್ಮತವಾಗಿ ನಡೆಸಲು ಮಾಧ್ಯಮಗಳ ಸಹಕಾರ ಅಗತ್ಯವಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣೆ ಅಧಿಕಾರಿ ಟಿ.ವೆಂಕಟೇಶ್ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಲೋಕಸಭಾ ಸಾರ್ವತ್ರಿಕ ಚುನಾವಣೆ–2024ರ ಸಂಬಂಧ ಮಾದರಿ ನೀತಿ ಸಂಹಿತೆ ಹಾಗೂ ಮಾಧ್ಯಮಗಳ ಹೊಣೆಗಾರಿಕೆ ಕುರಿತಂತೆ ಮಾಧ್ಯಮ ಪ್ರತಿನಿಧಿಗಳಿಗೆ ಆಯೋಜಿಸಲಾಗಿದ್ದ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು. ಚುನಾವಣೆ ಕಾರ್ಯ ವನ್ನು ಸುಗಮವಾಗಿ ನಿರ್ವಹಿಸಲು ಹಾಗೂ ಮಾಧ್ಯಮಗಳೊಂದಿಗೆ ಸಮನ್ವಯಕ್ಕಾಗಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಪ್ರತ್ಯೇಕ ಘಟಕ ತೆರೆಯಲಾಗುವುದು. ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಭೌಗೋಳಿಕ ವ್ಯಾಪ್ತಿ ದೊಡ್ಡದಿದೆ. ತುಮಕೂರು ಜಿಲ್ಲೆಯ ಎರಡು ವಿಧಾನಸಭಾ ಕ್ಷೇತ್ರಗಳು ಚಿತ್ರದುರ್ಗ ಲೋಕಸಭಾ ಕ್ಷೇತಕ್ಕೆ ಸೇರುತ್ತವೆ. ಮಾಧ್ಯಮಗಳು ತಮ್ಮ ಹೊಣೆಗಾರಿಕೆ ಅರಿತು ಯಶಸ್ವಿಯಾಗಿ ಚುನಾವಣೆ ನಡೆಸಲು ಸಹಕಾರ ನೀಡಬೇಕು. ಮಾದರಿ ನೀತಿ ಸಂಹಿತೆ ಜಾರಿಯಾದ ನಂತರ ರಾಜಕೀಯ ಪಕ್ಷಗಳು ಹಾಗೂ ಅಭ್ಯರ್ಥಿಗಳು ಚುನಾವಣೆ ಜಾಹೀರಾತುಗಳನ್ನು ಪ್ರಕಟಿಸುವ ಮುನ್ನ ಪ್ರಮಾಣೀಕರಣ ಪಡೆದುಕೊಳ್ಳಬೇಕು. ಮಾಧ್ಯಮಗಳು ಸುಳ್ಳು, ದ್ವೇಷ ಬಿತ್ತುವ ಹಾಗೂ ಪೇಯ್ಡ್ ನ್ಯೂಸ್ ಪ್ರಕಟಿಸಬಾರದು. ಇವುಗಳು ಮಾದರಿ ನೀತಿಯ ಸ್ಪಷ್ಟ ಉಲಂಘನೆಯಾಗುತ್ತವೆ. ಇದನ್ನು ಚುನಾವಣೆ ಆಯೋಗ ಗಂಭೀರವಾಗಿ ಪರಿಗಣಿಸುತ್ತದೆ. ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳಿಗೆ ಪ್ರಜಾಪ್ರಾತಿನಿಧ್ಯ ಕಾಯ್ದೆ ಅನ್ವಯ ಶಿಕ್ಷೆ ಹಾಗೂ ದಂಡ ವಿಧಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.ಜಿಲ್ಲಾ ಮಾಸ್ಟರ್ ತರಬೇತುದಾರ ಹಾಗೂ ಚಿತ್ರದುರ್ಗ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್, ಚುನಾವಣೆ ಮಾಧ್ಯಮ ಘಟಕ, ಮಾಧ್ಯಮ ಪ್ರಮಾಣೀಕರಣ ಹಾಗೂ ನಿಗಾ ಸಮಿತಿ, ಪೇಯ್ಡ್ ನ್ಯೂಸ್, ಸಾಮಾಜಿಕ ಮಾಧ್ಯಮಗಳ ಪಾತ್ರ ಸೇರಿದಂತೆ ಹಲವು ವಿಚಾರಗಳ ಕುರಿತು ಪ್ರಾತ್ಯಕ್ಷತೆಯೊಂದಿಗೆ ತರಬೇತಿ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಸಿಇಓ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹೆಚ್.ಜೆ.ಕುಮಾರಸ್ವಾಮಿ, ಜಿ.ಪಂ ಮುಖ್ಯ ಲೆಕ್ಕಾಧಿಕಾರಿ ಹಾಗೂ ಜಿಲ್ಲಾ ವೆಚ್ಚ ಉಸ್ತುವಾರು ಕೋಶದ ನೋಡಲ್ ಅಧಿಕಾರಿ ಡಿ.ಆರ್.ಮಧು, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ಸೇರಿದಂತೆ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಮಾಧ್ಯಮ ಪ್ರತಿನಿಧಿಗಳು ಇದ್ದರು.

## ಫಾಸ್ಟ್ ನ್ಯೂಸ್

### ಬಿಜೆಪಿ, ದಳ ಸೀಟು ಹಂಚಿಕೆ ಫೈನಲ್?

» ಮೊದಲ ಪುಟದಿಂದ

ಮೂಲಗಳ ಪ್ರಕಾರ ಜೆಡಿಎಸ್‌ಗೆ 3 ಕ್ಷೇತ್ರಗಳನ್ನು ಬಿಟ್ಟುಕೊಡಲು ಬಿಜೆಪಿ ಹೈಕಮಾಂಡ್ ಒಪ್ಪಿಗೆ ನೀಡಿದೆ ಎಂದು ತಿಳಿದುಬಂದಿದೆ. ಹಾಸನ, ಮಂಡ್ಯ ಮತ್ತು ಕೋಲಾರ್ ಕ್ಷೇತ್ರಗಳನ್ನು ಜೆಡಿಎಸ್ ಗೆ ಬಿಟ್ಟುಕೊಡಲು ತೀರ್ಮಾನಿಲಾಗಿದೆ. ಆದರೆ, ಜೆಡಿಎಸ್ ಬೆಂಗಳೂರು ಗ್ರಾಮಾಂತರ ಮತ್ತು ತುಮಕೂರು ಕ್ಷೇತ್ರ ಸೇರಿದಂತೆ 5 ಕ್ಷೇತ್ರಗಳಿಗೆ ಬೇಡಿಕೆ ಇಟ್ಟಿತ್ತು. ಸದ್ಯ 3 ಕ್ಷೇತ್ರಗಳನ್ನು ಬಿಟ್ಟುಕೊಟ್ಟಿದ್ದು, ಉಳಿದಂತೆ ಬೆಂಗಳೂರು ಗ್ರಾಮಾಂತರ ಮತ್ತು ತುಮಕೂರು ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ನಿರ್ಧರಿಸಲು ತೀರ್ಮಾನ ಮಾಡಲಾಗಿದೆ.ನಿನ್ನೆ (ಫೆ.21) ಅಮಿತ್ ಷಾ ಮತ್ತು ಎಚ್.ಡಿ.ಕುಮಾರಸ್ವಾಮಿ ನಡುವೆ ಮಧ್ಯರಾತ್ರಿ ನಡೆದ ಸಭೆಯಲ್ಲಿ ಈ ಕುರಿತು ಚರ್ಚೆಯಾಗಿದೆ ಎಂದು ತಿಳಿದುಬಂದಿದೆ.ಕರ್ನಾಟಕದ ಜನಸಂಖ್ಯೆಯ ಸುಮಾರು 16% ರಷ್ಟಿರುವ ಒಕ್ಕಲಿಗ ಮತವನ್ನು ಪರಿಗಣಿಸಿ ರಾಜ್ಯದ ರಾಜಕೀಯ ವಿಶ್ಲೇಷಕರು ಈ ಮೈತ್ರಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ. ಮೂಲಗಳ ಪ್ರಕಾರ ಜೆಡಿಎಸ್ ಕೋಟಾದಲ್ಲಿ ಇರುವ ಎಲ್ಲಾ 3 ಕ್ಷೇತ್ರಗಳು ಒಕ್ಕಲಿಗರ ಭದ್ರಕೋಟೆಗಳಾಗಿವೆ. ಒಕ್ಕಲಿಗರ ಮೇಲೆ ಜೆಡಿಎಸ್‌ಗೆ ಹಿಡಿತವಿದೆ. ಅಲ್ಲದೆ, ಪಕ್ಷದ ಮುಖ್ಯಸ್ಥ ಎಚ್.ಡಿ ಕುಮಾರಸ್ವಾಮಿ ಮತ್ತು ಅವರ ತಂದೆ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಒಕ್ಕಲಿಗ ಸಮುದಾಯಕ್ಕೆ ಸೇರಿದವರಾಗಿದ್ದರೆ, ಕಾಂಗ್ರೆಸ್‌ನಲ್ಲಿ ಡಿ.ಕೆ. ಶಿವಕುಮಾರ್ ಅವರು ಪ್ರಬಲ ಒಕ್ಕಲಿಗ ನಾಯಕ ಇದ್ದಾರೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಒಕ್ಕಲಿಗರು ತಮ್ಮ ಬೆಂಬಲವನ್ನು ವಿಭಜಿಸಿದ ಪರಿಣಾಮ ಜೆಡಿಎಸ್ ಮೇಲೆ ತೀವ್ರ ಪರಿಣಾಮ ಬೀರಿತು.ಈ ಲೋಕಾಸಭಾ ಕ್ಷೇತ್ರಗಳ ಚುನಾವಣೆಯಲ್ಲಿ ಒಕ್ಕಲಿಗರು ಯಾವ ರೀತಿಯಲ್ಲಿ ಮತ ಚಲಾಯಿಸುತ್ತಾರೆ ಎಂಬುದರ ಮೇಲೆ ಫಲಿತಾಂಶ ಅವಲಂಬಿತವಾಗಿರುತ್ತದೆ. 2019ರ ಲೋಕಸಭೆ ಚುನಾವಣೆಯಲ್ಲಿ, ಕರ್ನಾಟಕದಲ್ಲಿ ಜೆಡಿಎಸ್ ಮತ್ತು ಕಾಂಗ್ರೆಸ್ ಒಟ್ಟಿಗೆ ಸ್ಪರ್ಧಿಸಿದಾಗ, ಎರಡೂ ಪಕ್ಷಗಳು ಭಾರಿ ನಿರಾಶೆಯನ್ನು ಎದುರಿಸಿದವು, ತಲಾ ಒಂದು ಸ್ಥಾನವನ್ನು ಮಾತ್ರ ಪಡೆದುಕೊಂಡವು.

### ಮಾರ್ಚ್ ೯ರ ನಂತರ ಲೋಕಸಭೆ ಚುನಾವಣೆ ಘೋಷಣೆ ಸಾಧ್ಯತೆ

» ಮೊದಲ ಪುಟದಿಂದ

ಮಾರ್ಚ್ 12 ಮತ್ತು 13 ರಂದು ಅವರು ಮತ್ತೆ ಜಮ್ಮು ಮತ್ತು ಕಾಶ್ಮೀರಕ್ಕೆ ಭೇಟಿ ನೀಡಲಿದ್ದು, ಲೋಕಸಭೆ ಚುನಾವಣೆಯೊಂದಿಗೆ ಕೇಂದ್ರಾಡಳಿತ ಪ್ರದೇಶದಲ್ಲಿ ವಿಧಾನಸಭೆ ಚುನಾವಣೆಯನ್ನು ನಡೆಸಬಹುದೇ ಎಂಬುದನ್ನು ಪರೀಕ್ಷಿಸಲಿದ್ದಾರೆ. ಅಲ್ಲಿನ ಪರಿಸ್ಥಿತಿಯನ್ನು ವಿಶ್ಲೇಷಿ ಈ ಬಗ್ಗೆ ನಿರ್ಧಾರ ತೆಗೆದುಕೊಳ್ಳುತ್ತಾರೆ.

**ಯುಪಿಯಲ್ಲಿ ಬಿಜೆಪಿ ಚುನಾವಣಾ ತಂತ್ರ:** ಇನ್ನು, ಲೋಕಸಭೆ ಚುನಾವಣೆಗೆ ಅಭ್ಯರ್ಥಿಗಳನ್ನು ಘೋಷಿಸುವ ಮೊದಲು ಉತ್ತರ ಪ್ರದೇಶದ ಬಿಜೆಪಿಯ ಚುನಾವಣಾ ತಂತ್ರ ರಚಿಸುತ್ತಿದೆ. ಫೆಬ್ರವರಿ 20 ರಂದು ದೊಡ್ಡ ಸಭೆ ನಡೆದಿದ್ದು, ಮುಖ್ಯಮಂತ್ರಿ ಯೋಗಿ, ಬೈಜಯಂತ್ ಪಾಂಡಾ, ಭೂಪೇಂದ್ರ ಚೌಧರಿ, ಧರಂಪಾಲ್ ಸಿಂಗ್, ಎರಡೂ ಉಪ ಮುಖ್ಯಮಂತ್ರಿಗಳು, ಎಲ್ಲಾ ಮೋರ್ಚಾಗಳ ಅಧ್ಯಕ್ಷರು, ಪ್ರಾದೇಶಿಕ ಅಧ್ಯಕ್ಷರು ಮತ್ತು ರಾಜ್ಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದಾರೆ. ಲೋಕಸಭಾ ಚುನಾವಣೆಯ ರ್ಯಾಲಿಗಳ ಬಗ್ಗೆ ಕಾರ್ಯತಂತ್ರವನ್ನು ಮಾಡಲಾಗುತ್ತಿದೆ. ಪ್ರಧಾನಿ ನರೇಂದ್ರ ಮೋದಿ, ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಬಿಜೆಪಿ ರಾಷ್ಟ್ರಾಧ್ಯಕ್ಷ ಜೆಪಿ ನಡ್ಡಾ ಅವರು ಯುಪಿಯ ಪ್ರತಿ ಲೋಕಸಭೆಯನ್ನು ಕವರ್ ಮಾಡುವಂತೆ ಪ್ಲಾನ್ ಮಾಡಲಾಗುತ್ತಿದೆ.

### ಸೇವಾಲಾಲ್ ಜಯಂತಿ ಆಚರಿಸುವ ಕುರಿತು ಸಮಾಲೋಚನಾ ಸಭೆ

» ಚಿತ್ರದುರ್ಗ

ಸರ್ದಾರ್ ಸೇವಾಲಾಲ್ ಜಯಂತಿ ಹಾಗೂ ಮತಾಂತರ ತಡೆಗಟ್ಟುವ ಕುರಿತು ಬಂಜಾರ ಭವನದಲ್ಲಿ ಗುರುವಾರ ರಾಷ್ಟ್ರೀಯ ಗೋರ್(ಬಂಜಾರ) ಮಳಾವ್ ಕರ್ನಾಟಕ ಚಿತ್ರದುರ್ಗ ಜಿಲ್ಲೆ ಪ್ರಮುಖರ ಸಮಾಲೋಚನಾ ಸಭೆ ನಡೆಸಲಾಯಿತು. ಬಂಜಾರ ಲಂಬಾಣಿ ಸಮಾಜದ ಜಿಲ್ಲಾಧ್ಯಕ್ಷ ಎಂ.ಸತೀಶ್‌ಕುಮಾರ್ ಸಭೆಯನ್ನುದ್ದೇಶಿಸಿ ಮಾತನಾಡುತ್ತ ಮಾ.1 ರಂದು ಸರ್ದಾರ್ ಸೇವಾಲಾಲ್ ಜಯಂತಿಯನ್ನು ಆಚರಿಸಲಾಗುವುದು. ಪ್ರತಿ ವರ್ಷದಂತೆ ಈ ಬಾರಿಯ ನಮ್ಮ ಜನಾಂಗದ ವತಿಯಿಂದ ಜಯಂತಿಯನ್ನು ಆಚರಿಸುತ್ತಿದ್ದೇವೆ. ರಾಜಕೀಯ ಗಿಮಿಕ್‌ಗಾಗಿ ಅಲ್ಲ. ಎಲ್ಲೆಡೆ ಬಂಜಾರ ಜನಾಂಗದ ಮತಾಂತರವಾಗುತ್ತಿರುವುದನ್ನು ತಡೆಗಟ್ಟಬೇಕಿದೆ. ಮತಾಂತರಗೊಂಡವರಿಗೆ ಸರ್ಕಾರ ಮೀಸಲಾತಿಯನ್ನು ರದ್ದುಪಡಿಸಬೇಕೆಂದು ಮನವಿ ಮಾಡಿದರು. ಕರ್ನಾಟಕ ರಾಜ್ಯ ತಾಂಡ ಅಭಿವೃದ್ದಿ ನಿಗಮದ ನಿರ್ದೇಶಕ ಗಿರೀಶ್ ಮಾತನಾಡಿ ತಾಲ್ಲೂಕಿನಬೆನಕನಹಳ್ಳಿಯಲ್ಲಿಲಂಬಾಣಿಜನಾಂಗದ ಮತಾಂತರ ಜಾಸ್ತಿಯಾಗುತ್ತಿದೆ. ಆಸೆ ಆಮಿಷಗಳನ್ನು ತೋರಿಸಿ ಮತಾಂತರಗೊಳಿಸುತ್ತಿರುವವರ ವಿರುದ್ದ ಕಾನೂನು ರೀತಿಯಲ್ಲಿ ಸರ್ಕಾರ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು. ರಾಷ್ಟ್ರೀಯ ಗೋರ್(ಬಂಜಾರ) ಮಳಾವ್ ಅಧ್ಯಕ್ಷ ಬಸವರಾಜ್ ಚೌವ್ಹಾಣ್, ಕರ್ನಾಟಕ ರಾಜ್ಯ ತಾಂಡ ಅಭಿವೃದ್ಧಿ ನಿಗಮದ ನಿರ್ದೇಶಕ ಗಿರೀಶ್ ಸಿ. ಲಿಂಗ್ಯಾನಾಯ್ಕ ವೇದಿಕೆಯಲ್ಲಿದ್ದರು.

# ಮತಗಟ್ಟೆಗಳಿಗೆ ಖುದ್ದು ಭೇಟಿ ನೀಡಿ ವಸ್ತುಸ್ಥಿತಿ ಕುರಿತು ವರದಿ ಸಲ್ಲಿಸಿ: ತಹಶೀಲ್ದಾರ್‌ಗಳಿಗೆ ಡಿಸಿ ಸೂಚನೆ

» ಚಿತ್ರದುರ್ಗ



ಎಲ್ಲಾ ತಹಶೀಲ್ದಾರರು ತಮ್ಮ ವ್ಯಾಪ್ತಿಯ ಎಲ್ಲಾ ಮತಗಟ್ಟೆಗಳಿಗೆ ಖುದ್ದು ಭೇಟಿ ನೀಡಿ ವಸ್ತುಸ್ಥಿತಿ ಕುರಿತು ವರದಿ ಸಲ್ಲಿಸಿ. ಚುನಾವಣಾ ಆಯೋಗದ ನಿರ್ದೇಶನದಂತೆ ಎಲ್ಲಾ ಮೂಲಭೂತ ಸೌಕರ್ಯಗಳು ಮತಗಟ್ಟೆಗಳಲ್ಲಿ ಇರುವಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ನಗರದ ಜಿಲ್ಲಾಧಿಕಾರಿ ಸಭಾಂಗಣದಲ್ಲಿ ಗುರುವಾರ ಸಾರ್ವತ್ರಿಕ ಲೋಕಸಭಾ ಚುನಾವಣೆ-2024 ಅಂಗವಾಗಿ ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಗಳ ತರಬೇತಿ ನೀಡುವ ಕುರಿತು ಜರುಗಿದ ಸಭೆಯಲ್ಲಿ ಅವರು ಮಾತನಾಡಿದರು.

ವಿದ್ಯುತ್, ಕುಡಿಯುವ ನೀರು, ಶೌಚಾಲಯ, ವಿಕಲಚೇತರನರಿಗೆ ರ್‍ಯಾಂಪ್ ಸೇರಿದಂತೆ ಎಲ್ಲಾ ಮೂಲಭೂತ ಸೌಕರ್ಯಗಳು ಮತಗಟ್ಟೆ ಕೇಂದ್ರಗಳಲ್ಲಿ ಇರಬೇಕು. ಎಲ್ಲಿಯಾದರೂ ಕುಂದುಕೊರತೆ ಕಂಡುಬಂದರೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿ ಸರಿಪಡಿಸಬೇಕು ಎಂದರು.

ಚುನಾವಣೆ ಆಯೋಗದ ನಿರ್ದೇಶನದಂತೆ ಅಗತ್ಯ ತುರ್ತು ಸೇವಾ ಕಾರ್ಯಗಳಲ್ಲಿ ತೊಡಗಿರುವ ಸಿಬ್ಬಂದಿ ಹೊರತು ಪಡಿಸಿ, ಉಳಿದ ಸಿಬ್ಬಂದಿ ಪಟ್ಟಿ ಸಿದ್ದಪಡಿಸಿ ಚುನಾವಣೆ ಕಾರ್ಯಕ್ಕೆ ನಿಯೋಜಿಸಬೇಕು. ಚುನಾವಣೆ ಕಾರ್ಯಕ್ಕೆ ಬೇಕಾದ ಒಟ್ಟು ಸಿಬ್ಬಂದಿ ಬಲಕ್ಕೆ ಸರಿಸಮನಾಗಿ ಶೇ.20 ರಷ್ಟು ಸಿಬ್ಬಂದಿ ಬಲವನ್ನು ಹೆಚ್ಚುವರಿಯಾಗಿ ಕಾಯ್ದಿರಿಸಬೇಕು. ಈ ಕುರಿತು ಹೆಚ್.ಆರ್.ಎಂ.ಎಸ್ ತಂತ್ರಾಂಶದಿಂದ ಮಾಹಿತಿ ಪಡೆದುಕೊಳ್ಳಬೇಕು. ಚುನಾವಣೆ ಕಾರ್ಯಕ್ಕೆ ನಿಯುಕ್ತಿಗೊಂಡ ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಅಂಚೆ ಮತದಾನಕ್ಕೆ ಅವಕಾಶ ನೀಡಬೇಕು. ಯಾವುದೇ ಸಿಬ್ಬಂದಿ ಮತದಾನ ಪ್ರಕ್ರಿಯೆಯಿಂದ ಹೊರ ಉಳಿಯಬಾರದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾನವ ಸಂಪನ್ಮೂಲ ನಿರ್ವಹಣೆ ಸಮಿತಿಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಚುನಾವಣೆ ಕಾರ್ಯ ನೇಮಕಗೊಳ್ಳುವ ಪ್ರತಿಯೊಂದು ಹಂತದ ಅಧಿಕಾರಿಗಳಿಗೂ ತರಬೇತಿಯನ್ನು ನೀಡಬೇಕು. ಚುನಾವಣೆ ಸಂದರ್ಭದಲ್ಲಿ ಮಾಡಬೇಕಾದ ಕಾರ್ಯಗಳು, ನಿರ್ವಹಿಸಬೇಕಾದ ಜವಾಬ್ದಾರಿ ಹಾಗೂ ಮಾಡಬಾರದ ಕಾರ್ಯಗಳು ಯಾವುವು ಎಂಬುದರ ಕುರಿತು ತರಬೇತಿಯಲ್ಲಿ ಮಾಹಿತಿ ನೀಡಬೇಕು. ತರಬೇತಿ ಕಾರ್ಯವನ್ನು ಉಪನ್ಯಾಸ ಮಾದರಿಯಲ್ಲಿ ಮಾಡದೇ, ಪರಸ್ಪರ ಸಂವಾದ ನಡೆಸುವ ರೀತಿಯಲ್ಲಿ ಆಯೋಜಿಸಬೇಕು. ಎಲ್ಲಾ ಹಂತದ ಅಧಿಕಾರಿಗಳೇ ತರಬೇತಿಯಲ್ಲಿ ನೀಡಬೇಕಾದ ವಿಷಯ ಸಂಬಂಧಿ ವಿವರಗಳು ಉಳ್ಳ ಮಾಹಿತಿ ಸಂಚಿಕೆಗಳನ್ನು ನೀಡಲು ಕ್ರಮಕೈಗೊಳ್ಳುವಂತೆ ತರಬೇತಿ ನಿರ್ವಹಣೆಯ ಉಸ್ತುವಾರಿ ಅಧಿಕಾರಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಅವರಿಗೆ ನಿರ್ದೇಶನ ನೀಡಿದರು.

ಚುನಾವಣೆ ಪ್ರಚಾರ ಕಾರ್ಯಕ್ಕೆ ಸ್ಥಳ ನಿಗದಿ ಪಡಿಸಿ: ಎಲ್ಲಾ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯಿತಿಗಳು ಚುನಾವಣೆ ಪ್ರಚಾರ ಕಾರ್ಯಕ್ಕೆ ನಿಗದಿ ಪಡಿಸಿದ ಸ್ಥಳಗಳನ್ನು ಗುರುತಿಸಿ, ಅಧಿಸೂಚನೆ ಹೊರಡಿಸಬೇಕು. ಚುನಾವಣೆ ಪ್ರಚಾರದ ಫ್ಲೆಕ್ಸ್, ಹೋರ್ಡಿಂಗ್ಸ್, ಬಂಟಿಂಗ್ಸ್‌ಗಳನ್ನು ಸಹ ಎಲ್ಲೆಂದರಲ್ಲಿ ಹಾಕಲು ಅನುಮತಿ ನೀಡದೆ ಇವುಗಳನ್ನು ನಿಗದಿ ಪಡಿಸಿದ ಸ್ಥಳಗಳಲ್ಲಿ ಪ್ರದರ್ಶಿಸಲು ಅವಕಾಶ ನೀಡಬೇಕು. ಈ ಸ್ಥಳಗಳ ಬಾಡಿಗೆ ನಿಗಧಿಪಡಿಸಿ ಪರವಾನಿಗೆ ನೀಡಬೇಕು. ಯಾವುದೇ ಧಾರ್ಮಿಕ ಕೇಂದ್ರಗಳು, ಸರ್ಕಾರದ ಅನುದಾನದಲ್ಲಿ ನಿರ್ಮಿಸಿದ ಕಟ್ಟಡಗಗಳಲ್ಲಿ ಚುನಾವಣಾ ಪ್ರಚಾರ ಕಾರ್ಯಕ್ಕೆ ಅನುಮತಿ ನೀಡಬಾರದು. ಇದು ಮಾದರಿ ನೀತಿ ಸಂಹಿತೆಯ ಉಲ್ಲಂಘನೆಯಾಗುತ್ತದೆ. ಇದರ ವಿರುದ್ದ ಪ್ರಕರಣ ದಾಖಲಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ನಗರ ಪ್ರದೇಶದಲ್ಲಿ ಹೆಚ್ಚು ಸ್ವೀಪ್ ಚಟುವಟಿಕೆ ಕೈಗೊಳ್ಳಲು ಸೂಚನೆ: ಕಳೆದ ಚುನಾವಣೆಗಳಲ್ಲಿ ಜಿಲ್ಲೆಯ ಗ್ರಾಮೀಣ ಭಾಗಗಳಿಗಿಂತಲೂ ನಗರ ಪ್ರದೇಶಗಳಲ್ಲಿ ಮತದಾನ ಪ್ರಮಾಣ ಕಡಿಮೆಯಾಗಿದೆ. ರಾಜ್ಯದ ಸರಾಸರಿ ಮತದಾನ ಪ್ರಮಾಣಕ್ಕಿಂತಲೂ ನಗರ ಪ್ರದೇಶಗಳಲ್ಲಿ ಮತದಾನ ಪ್ರಮಾಣ ಕಡಿಮೆಯಾಗಿರುವುದು ಕಂಡುಬಂದಿದೆ. ಈ ಹಿನ್ನಲೆಯಲ್ಲಿ ಜಿ.ಪಂ ಸಿಇಓ ನೇತೃತ್ವದ ಜಿಲ್ಲಾ ಸ್ವೀಪ್ ಸಮಿತಿ ನಗರ ಪ್ರದೇಶಗಳಲ್ಲಿ ಹೆಚ್ಚು ಮತದಾನದ ಜಾಗೃತಿ ಮೂಡಿಸಬೇಕು. ಈಗಾಗಲೇ ಸ್ವೀಪ್ ಸಮಿತಿ ಚುಟುವಟಿಕೆಗಳಿಗೆ ಬಿಡುಗಡೆಯಾದ ರೂ.11 ಲಕ್ಷ ಹಣವನ್ನು ಸ್ವೀಪ್ ಸಮಿತಿ ಅಧ್ಯಕ್ಷರಿಗೆ ವರ್ಗಾಹಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು.

### ಜಿಲ್ಲೆಯ 194 ಗ್ರಾಮ ಪಂಚಾಯಿತಿ, 7 ಸ್ಥಳೀಯ ಸಂಸ್ಥೆ ವ್ಯಾಪ್ತಿಯಲ್ಲಿ ಸಂವಿಧಾನ ಜಾಗೃತಿ

# ಜನರಿಂದ ಅತ್ಯುತ್ತಮ ಸ್ಪಂದನೆ; ಜಿಲ್ಲಾಧಿಕಾರಿ

» ದಾವಣಗೆರೆ

ಗಣರಾಜ್ಯೋತ್ಸವದ 75 ನೇ ವರ್ಷದ ಅಂಗವಾಗಿ ಸಂವಿಧಾನದ ಕುರಿತು ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಸರ್ಕಾರ ಸಂವಿಧಾನ ಜಾಗೃತಿ ಜಾಥಾ ಏರ್ಪಡಿಸಿದೆ. ದಾವಣಗೆರೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿ ಕೇಂದ್ರಸ್ಥಾನ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ ಸಂಚರಿಸುವ ಮೂಲಕ ಕಾರ್ಯಕ್ರಮವನ್ನು ಎಲ್ಲರ ಸಹಕಾರದಿಂದ ಯಶಸ್ವಿಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.



ಅವರು ಗುರುವಾರ ಆಫೀಸರ್ಸ್ ಕ್ಲಬ್‌ನಲ್ಲಿ ಸಂವಿಧಾನ ಜಾಗೃತಿ ಜಾಥಾ ಕುರಿತಂತೆ ಕರೆಯಲಾದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ಸಂವಿಧಾನ ಜಾಗೃತಿ ಜಾಥಾಗೆ ಜನವರಿ 26 ರಂದು ನಡೆದ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಅವರು ಚಾಲನೆ ನೀಡಿದ್ದರು. ಜನವರಿ 26 ರಿಂದ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಸಂಚರಿಸುವ ಮೂಲಕ ಜನಸಾಮಾನ್ಯರಿಗೂಸಂವಿಧಾನದಆಶಯಗಳನ್ನು ತಲುಪಿಸುವ ಕೆಲಸ ಮಾಡಲಾಗಿದೆ. ಈ ವೇಳೆ ಶಾಲಾ, ಕಾಲೇಜಿನ ವಿದ್ಯಾರ್ಥಿಗಳು, ಸ್ವ ಸಹಾಯ ಸಂಘದ ಮಹಿಳೆಯರು, ರೈತರು, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಸದಸ್ಯರು ಸೇರಿದಂತೆ ಹಿರಿಯ ನಾಗರಿಕರು ಜಾಥಾ ಸಂದರ್ಭದಲ್ಲಿ ಭಾಗವಹಿಸುವ ಮೂಲಕ ಸಂವಿಧಾನ ಪೀಠಿಕೆಯ ಪ್ರತಿಜ್ಞಾವಿಧಿ ಸ್ವೀಕರಿಸಿರುತ್ತಾರೆ ಎಂದರು.

ಜಾಥಾ ವೇಳೆ ವಿವಿಧ ಕಲಾ ತಂಡಗಳು ಭಾಗವಹಿಸಿದ್ದು ವಿಶೇಷವಾಗಿದ್ದರೆ ಸ್ಥಳೀಯ ವಾದ್ಯ ಮೇಳಗಳು ಇದರಲ್ಲಿ ಭಾಗವಹಿಸಿವೆ. ಸ್ತಬ್ದಚಿತ್ರದಲ್ಲಿ ಸಂವಿಧಾನ ಶಿಲ್ಪಿ ಡಾ; ಬಿ.ಆರ್. ಅಂಬೇಡ್ಕರ್ , ಬಸವಣ್ಣ, ಬುದ್ದನ ಪ್ರತಿಮೆಯನ್ನು ಅಳವಡಿಸುವ ಮೂಲಕ, ವರ್ಗ ರಹಿತ, ಸಮ ಸಮಾಜ ನಿರ್ಮಾಣ, ಬ್ರಾತೃತ್ವ ಭಾವನೆ ಬೆಳೆಸುವುದು, ಸರ್ಕಾರ ಗ್ಯಾರಂಟಿ ಯೋಜನೆಗಳ ಮೂಲಕ ಸಾಮಾಜಿಕ, ಆರ್ಥಿಕ ನ್ಯಾಯ ಒದಗಿಸಲು ಅನುಷ್ಟಾನ ಮಾಡಿದ ಸೌಲಭ್ಯಗಳ ಬಗ್ಗೆ ಅರಿವು ಮೂಡಿಸುವುದು ಜಾಥಾ ಉದ್ದೇಶವಾಗಿತ್ತು ಎಂದರು.

ಜಾಥಾ ವೇಳೆ ಸೈಕಲ್ ರ್‍ಯಾಲಿ, ಬೈಕ್ ರ್‍ಯಾಲಿ, ಕ್ಯಾಂಡಲ್ ಮಾರ್ಚಿಂಗ್, ಎತ್ತಿನಗಾಡಿ ಮೆರವಣಿಗೆ, ರಂಗೋಲಿ ಸ್ಪರ್ಧೆ ಸೇರಿದಂತೆ ಅನೇಕ ಕಾರ್ಯಕ್ರಮಗಳನ್ನು ರೂಪಿಸಲಾಗಿತ್ತು. ಅನೇಕ ಸರ್ಕಾರಿ ಕಾರ್ಯಕ್ರಮ, ಸಭೆಗಳಲ್ಲಿ ಸಂವಿಧಾನದ ಬಗ್ಗೆ ಅರಿವು ಮೂಡಿಸಲು ಪ್ರಸ್ತಾವನೆ ಓದುವ ಮೂಲಕ ಪ್ರತಿಜ್ಞೆ ಮಾಡಲಾಗಿದೆ ಎಂದರು.

ಸಾಮಾಜಿಕ ಜಾಲತಾಣ ಬಳಕೆ; ಸಂವಿಧಾನ ಜಾಗೃತಿ ಜಾಥಾ ಅಂಗವಾಗಿ ಸಾಮಾಜಿಕ ಜಾಲಥಾಣಗಳಾದ ಫೇಸ್ಬುಕ್, ಟ್ವಿಟರ್, ಇನ್‌ಸ್ಟಾಗ್ರಾಂ, ಯೂಟ್ಯೂಬ್ ಮೂಲಕ ಪ್ರಚಾರವನ್ನು ಕೈಗೊಂಡಿದ್ದು ಒಟ್ಟು 36 ಲಕ್ಷ ಲೈಕ್‌ಗಳು ಬಂದಿದ್ದು ಜಾಲತಾಣದಲ್ಲಿಯು ಎಲ್ಲಾ ವರ್ಗದ ಜನರನ್ನು ತಲುಪಲಾಗಿದೆ. ಜಾಥಾ ಮಾರ್ಚ್ 7 ರಂದು ಬೆಂಗಳೂರಿನಲ್ಲಿ ನಡೆಯಲಿರುವ ಬೃಹತ್ ಕಾರ್ಯಕ್ರಮದಲ್ಲಿ ಭಾಗವಹಿಸುವ ಮೂಲಕ ಸಂಪನ್ನವಾಗಲಿದೆ ಎಂದರು.

ಬೇಸಿಗೆ ಎದುರಿಸಲು ಸಿದ್ದತೆ; ಈ ವರ್ಷ ಮುಂಗಾರು ಹಾಗೂ ಹಿಂಗಾರು ಮಳೆ ಕೈಕೊಟ್ಟಿದ್ದರಿಂದ ಆಗಸ್ಟ್ ತಿಂಗಳಲ್ಲಿ ಶೇ 90 ರಷ್ಟು ಮಳೆ ಕೊರತೆ ಎದುರಿಸಲಾಗಿದೆ. ಇದರಿಂದ ಅಂತರ್ಜಲ ಮಟ್ಟ ಗಣನೀಯವಾಗಿ ಇಳಿಕೆಯಾಗಿದ್ದು ಕೊಳವೆಬಾವಿ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದ್ದ 19 ಗ್ರಾಮಗಳಲ್ಲಿ ಅಂತರ್ಜಲ ಕುಸಿತದಿಂದ ಖಾಸಗಿ ಬೋರ್‌ವೆಲ್ ಬಾಡಿಗೆ ಪಡೆದು 19 ಗ್ರಾಮಗಳಲ್ಲಿ ನೀರು ಪೂರೈಕೆ ಮಾಡಲಾಗುತ್ತಿದೆ. ಇದರ ಜೊತೆಗೆ ತೀವ್ರ ಬಿಸಿಲು ಇರುವುದರಿಂದ ಮುಂದೆ ಸಮಸ್ಯೆಯಾಗಲಿರುವ 126 ಗ್ರಾಮಗಳ ಪಟ್ಟಿಯನ್ನು ಸಿದ್ದಪಡಿಸಿಕೊಂಡಿದ್ದು ಇಲ್ಲಿ ಖಾಸಗಿ ಕೊಳವೆಬಾವಿ ಗುರುತಿಸಿಟ್ಟುಕೊಳ್ಳಲಾಗಿದೆ. ಅವುಗಳು ಲಭ್ಯವಾಗದಲಿದ್ದಲ್ಲಿ ಸಮಸ್ಯೆಯಾದ 24 ಗಂಟೆಯೊಳಗೆ ಟ್ಯಾಂಕರ್‌ಗಳ ಮೂಲಕ ನೀರು ಒದಗಿಸಲು ಸಿದ್ದತೆ ಮಾಡಿಕೊಳ್ಳಲಾಗಿದೆ.

ಬಹುಗ್ರಾಮ ಕುಡಿಯುವ ನೀರು ಯೋಜನೆಯಡಿ ಪೂರೈಕೆಯಾಗುತ್ತಿರುವ ಗ್ರಾಮಗಳಿಗೆ ನೀರಿನ ಸಮಸ್ಯೆ ಇರುವುದಿಲ್ಲ. ಭದ್ರಾ ಜಲಾಶಯದ ಮೂಲಕ ತುಂಗಭದ್ರಾ ನದಿಗೆ ಹಾಗೂ ಕಾಲುವೆಗಳಿಗೆ ನೀರು ಬಿಡಿಸಲಾಗಿದೆ. ಶಾಂತಿಸಾಗರದಿಂದ ಹಲವು ಗ್ರಾಮಗಳಿಗೆ ನೀರು ಪೂರೈಕೆಯಾಗುತ್ತಿದ್ದು ಕಾಲುವೆ ಮೂಲಕ ಶಾಂತಿಸಾಗರಕ್ಕೆ ನೀರು ಬಿಡಿಸಲಾಗಿದೆ ಎಂದರು.

ಕಾಲುವೆಯ ಕೊನೆ ಭಾಗದ ರೈತರಿಗೂ ನೀರು ತಲುಪಿಸುವ ಉದ್ದೇಶದಿಂದ ನಾಲೆಗೆ ಅಕ್ರಮವಾಗಿ ಅಳವಡಿಸಲಾಗಿದ್ದ ಪಂಪ್‌ಸೆಟ್‌ಗಳ ತೆರವಿಗೆ ತಂಡಗಳನ್ನು ರಚಿಸಿ ಕ್ರಮ ಕೈಗೊಳ್ಳಲಾಗಿದೆ. ಎಲ್ಲೆಲ್ಲಿ ಕಾನೂನಾತ್ಮಕ ಸಮಸ್ಯೆ ಎದುರಾಗುತ್ತದೆ, ಅಂತಹ ಭಾಗದಲ್ಲಿ 144 ಸೆಕ್ಷನ್ ಜಾರಿಗೊಳಿಸಲು ತಹಶೀಲ್ದಾರರಿಗೆ ಸೂಚನೆ ನೀಡಲಾಗಿದೆ ಎಂದರು.

ಕೊಳವೆಬಾವಿ ಕೊರೆಸಲು ಅನುಮತಿ ಬೇಕು; ಅಂತರ್ಜಲ ಮಟ್ಟ ಕಡಿಮೆಯಾಗಿದ್ದರಿಂದ ಕೊಳವೆಬಾವಿ ಕೊರೆಯಲು ನಿರ್ಬಂಧವಿದೆ. ಕೊಳವೆಬಾವಿ ಕೊರೆಯಲು ರಿಗ್ ಮಾಲಿಕರು ನಮೂನೆ-7 ರಲ್ಲಿ ಅನುಮತಿ ಪಡೆಯಬೇಕಾಗಿರುತ್ತದೆ ಎಂದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್ ಮಾತನಾಡಿ ಗ್ರಾಮಾಂತರ ಪ್ರದೇಶದಲ್ಲಿ ಸಂವಿಧಾನ ಜಾಗೃತಿ ಜಾಥಾವನ್ನು ವ್ಯವಸ್ಥಿತ ಹಾಗೂ ಪರಿಣಾಮಕಾರಿಯಾಗಿ ನಡೆಸಲಾಗಿದೆ. ಜಿಲ್ಲೆಯ 194 ಗ್ರಾಮ ಪಂಚಾಯಿತಿಗಳ ಕೇಂದ್ರಸ್ಥಾನದಲ್ಲಿ ಅದ್ದೂರಿಯಾಗಿ ಸ್ವಾಗತಿಸಿದರು.

### 26ರಂದು ಸಂತ ಸೇವಾಲಾಲರ 285ನೇ ಜಯಂತೋತ್ಸವ



» ಚಿತ್ರದುರ್ಗ

ಜಗತ್ತಿಗೆ ಶಾಂತಿ ಸಹಬಾಳ್ವೆ ಸೌಹಾರ್ದತೆಯ ಸಂದೇಶವನ್ನು ಸಾರಿದ ಸಂತ ಸೇವಾಲಾಲರ 285ನೇ ಜಯಂತೋತ್ಸವ ಹಾಗೂ ವಿಧಾನಸಭೆ ಉಪ ಸಭಾಧ್ಯಕ್ಷ ರುದ್ರಪ್ಪ ಮಾನಪ್ಪ ಲಮಾಣಿಯವರಿಗೆ ಅಭಿನಂದನಾ ಸಮಾರಂಭವು ಫೆ. 26ರಂದು ನಗರದ ತರಾಸು ರಂಗಮಂದಿರಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಸಂತ ಸೇವಾಲಾಲ್ ಜನ್ಮಸ್ಥಾನ ಮಹಾಮಠ ಸಮಿತಿಯ ಪ್ರಧಾನ ಕಾರ್ಯದರ್ಶಿ ಅರುಣ್ ಕುಮಾರ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ಬಂಜಾರ ಜನ ಜಾಗೃತಿ ಅಭಿಯಾನ ಸಮಿತಿ ಕರ್ನಾಟಕ ಮತ್ತು ಬಂಜಾರ ರಕ್ಷಣಾ ವೇದಿಕೆ ಹಾಗೂ ಬಂಜಾರ ಸಮುದಾಯಗಳ ನೇತೃತ್ವದಲ್ಲಿ ಫೆ. 26ರಂದು ಬೆಳಿಗ್ಗೆ 11ಕ್ಕೆ ಕಾರ್ಯಕ್ರಮ ನಡೆಯಲಿದ್ದು, ಅಂದು ಬೆಳಿಗ್ಗೆ 10ಕ್ಕೆ ನಗರದ ನೀಲಕಂಠೇಶ್ವರ ದೇವಾಲಯದಿಂದ ಬೆಳ್ಳಿ ರಥದಲ್ಲಿ ಸೇವಾಲಾಲ್ ರವರ ಭಾವಚಿತ್ರ, ಡಾ.ಬಿ.ಆರ್ ಅಂಬೇಡ್ಕರ್, ಹಾಗೂ ನಾಲ್ವಡಿ ಕೃಷ್ಣರಾಜರ ಭಾವಚಿತ್ರದೊಂದಿಗೆ ನಗರದ ಪ್ರಮುಖ ಬೀದಿಗಳಲ್ಲಿ ವಿವಿಧ ಕಲಾತಂಡದೊಂದಿಗೆ ಮೆರವಣಿಗೆಯನ್ನು ನಡೆಸಲಾಗುವುದು. ನೀಲಕಂಠೇಶ್ವರ ದೇವಾಲಯದಿಂದ ಪ್ರಾರಂಭವಾಗುವ ಮೆರವಣಿಗೆಯೂ ಬಿ.ಡಿ.ರಸ್ತೆ, ಕಿತ್ತೂರು ರಾಣಿ ಚನ್ನಮ್ಮ ವೃತ್ತ, ಮಹಾವೀರ ವೃತ್ತ, ಅಂಬೇಡ್ಕರ್ ವೃತ್ತ, ಒನಕೆ ಓಬವ್ವ ವೃತ್ತ, ಮದಕರಿ ನಾಯಕ ವೃತ್ತದ ಮೂಲಕ ತರಾಸು ರಂಗಮಂದಿರವನ್ನು ತಲುಪಲಿದೆ ಎಂದರು.

ಜಯಂತೋತ್ಸವವನ್ನು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಶಾಸಕರುಗಳಾದ ರಘುಮೂರ್ತಿ, ಬಿ.ಜೆ.ಗೋವಿಂದಪ್ಪ, ಕೆ.ಸಿ.ವಿರೇಂದ್ರ ಪಪ್ಪಿ, ಕೆ.ಸಿ.ನಾಗರಾಜ್, ಸೇರಿದಂತೆ ಸಮಾಜದ ಇತರೆ ಗಣ್ಯರು ಭಾಗವಹಿಸಲಿದ್ದಾರೆ. ಸಮಾರಂಭದ ಅಧ್ಯಕ್ಷತೆಯನ್ನು ಸಂತ ಸೇವಾಲಾಲ್ ಜನ್ಮಸ್ಥಾನ ಮಹಾಮಠ ಸಮಿತಿಯ ಪ್ರಧಾನ ಕಾರ್ಯದರ್ಶಿ ಅರುಣ್ ಕುಮಾರ್ ವಹಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಸಮಾಜದ ಮಹಿಳೆಯರಿಂದ ತೀಜ್ ಉತ್ಸವ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದೊಂದಿಗೆ ಬಂಜಾರ ಕಲ್ಚರಲ್ ಫೆಸ್ಟಿವಲ್ ಸಹಾ ನಡೆಯಲಿದೆ ಎಂದು ತಿಳಿಸಿದರು. ಗೋಷ್ಠಿಯಲ್ಲಿ ಉತ್ಸವ ಸಮಿತಿಯ ಸದಸ್ಯರಾದ ಆರ್.ನಿಂಗಾನಾಯ್ಕ್, ತಿಪ್ಪೇಶ್ ನಾಯ್ಕ್, ಎಲ್.ರಮೇಶ್, ಅನಿಲ್, ಗಣೇಶ್ ನಾಯ್ಕ್, ಚಂದ್ರಾನಾಯ್ಕ್, ಆರ್.ನವೀನ್ ಹಾಗೂ ಡಾ.ಕೆ.ಈಶ್ವರಪ್ಪ ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

# ತ್ವರಿತವಾಗಿ ರಸ್ತೆ ಕಾಮಗಾರಿ ಪೂರೈಸಿ: ಸಚಿವ ನಾರಾಯಣಸ್ವಾಮಿ

» ಹೊಸದುರ್ಗ

ನಗರದ ಹೊಳಲ್ಕೆರೆ - ಹೊಸದುರ್ಗ - ತರೀಕೆರೆ ಮುಖ್ಯರಸ್ತೆಗಳಲ್ಲಿ ಕೇಂದ್ರ ಸರ್ಕಾರದ ಯೋಜನೆಯ ರಸ್ತೆ ಕಾಮಗಾರಿ ನಡೆಯುತ್ತಿದ್ದು, ಕಾಮಗಾರಿ ನಡೆಯುವ ಸ್ಥಳದಲ್ಲಿ ದೂಳಿನಿಂದ ಜನರ ಆರೋಗ್ಯದಲ್ಲಿ ತುಂಬಾ ವ್ಯಕ್ತಿಯ ಉಂಟಾಗುತ್ತಿದೆ ಎಂಬ ಮಾಹಿತಿ ಗಮನಕ್ಕೆ ಬಂದಿದೆ. ಸಾರ್ವಜನಿಕರಿಗೆ ತೊಂದರೆಯಾಗದಂತೆ ನೀರು ಹಾಕಿ, ಕಾಮಗಾರಿ ಕೆಲಸವನ್ನು ಗುತ್ತಿಗೆದಾರರು ಮಾಡುತ್ತಿಲ್ಲ. ನಗರ ಭಾಗದ ರಸ್ತೆಯ ಅಕ್ಕಪಕ್ಕದಲ್ಲಿ ಚರಂಡಿ ಕಾಮಗಾರಿ ಸರಿಯಾಗಿ ನಡೆಯುತ್ತಿಲ್ಲವೆಂಬ ದೂರು ಬಂದಿದ್ದು, ತಕ್ಷಣವೇ ಸಂಬಂಧಪಟ್ಟ ಅಧಿಕಾರಿಗಳ ಸಭೆ ಕರೆದು ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಹಾಗೂ ತ್ವರಿತವಾಗಿ ಕಾಮಗಾರಿ ಮುಗಿಸಲು ಸೂಚನೆ ನೀಡುವೆ ಎಂದು ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಹೇಳಿದರು.



ಹೊಸದುರ್ಗ ಪಟ್ಟಣದನ್ಯಾಯಾಲಯದ ಮುಂಭಾಗ ನಡೆಯುತ್ತಿರುವ ರಸ್ತೆ ರಸ್ತೆ ಅಭಿವೃದ್ಧಿ ಕಾಮಗಾರಿ ವೀಕ್ಷಿಸಿ, ನಂತರ ಪ್ರವಾಸಿ ಮಂದಿರದಲ್ಲಿ ಕಾರ್ಯಕರ್ತರ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ದೇಶದಲ್ಲಿ ಅತ್ಯಂತ ಶಕ್ತಿಶಾಲಿ ರಾಷ್ಟ್ರ ಭಕ್ತ ಕಾರ್ಯಕರ್ತರ ಸಂಘಟನೆಯಾಗಿ ಬಲಗೊಂಡಿದ್ದು, ಪ್ರಧಾನಿ ನರೇಂದ್ರ ಮೋದಿಯವರು ಈ ದೇಶದ ಜನಮಾನಸದಲ್ಲಿ ಅತ್ಯಂತ ವಿಶ್ವಾಸಾರ್ಹ ವ್ಯಕ್ತಿಯಾಗಿ ಬದ್ಧತೆ ಮೆರೆದಿದ್ದಾರೆ. ಪ್ರಧಾನಿಯವರು ರೈತರಿಗೆ, ಜನಸಾಮಾನ್ಯರಿಗೆ ತಲುಪುವ ಯೋಜನೆ ರೂಪಿಸಿದ್ದು, ಬಿಜೆಪಿ ಕಾರ್ಯಕರ್ತರು, ಮೋದಿ ಅಭಿಮಾನಿಗಳು, ಮತ್ತು ರಾಷ್ಟ್ರಭಕ್ತರು ನರೇಂದ್ರ ಮೋದಿಯವರನ್ನು 3ನೇ ಬಾರಿಗೆ ಆಯ್ಕೆ ಮಾಡಲು ಕಾತುರದಿಂದ ಕಾಯುತ್ತಿದ್ದಾರೆ.

ಪ್ರಸ್ತುತ ಮಳೆಯಿಲ್ಲದೆ ಚಿತ್ರದುರ್ಗ ಲೋಕಸಭಾ ಕ್ಷೇತ್ರದಾದ್ಯಂತ ತೀರ್ವ ಬರಗಾಲ ತಲೆದೋರಿದ್ದು, ರೈತರು ಸಂಕಷ್ಟಕ್ಕೆ ಸಿಲುಕಿ ಬಹುತೇಕ ಬೋರ್‌ವೆಲ್‌ಗಳು ಸಂಪೂರ್ಣವಾಗಿ ನೀರು ಬಾರದೆ ಬತ್ತಿಹೋಗಿವೆ. ವಿವಿ ಸಾಗರ ನಾಲೆಯಲ್ಲಿ ರೈತರಿಗೆ ಹಾಗೂ ಕುಡಿಯುವ ನೀರಿಗೆ ಸಂಬಂಧಿಸಿದಂತೆ ನೀರನ್ನ ಹರಿಸುತ್ತಿದ್ದು, ಅಣೆಕಟ್ಟಿನಲ್ಲಿರುವ ನೀರಿನ ಸಂಗ್ರಹದ ಮಾಹಿತಿ ತರಿಸಿ, ಕುಡಿಯುವ ನೀರು ಹಾಗೂ ಕೃಷಿ ಚಟುವಟಿಕೆಗೆ ಸಂಬಂಧಿಸಿದಂತೆ ಅಧಿಕಾರಿಗಳೊಂದಿಗೆ ಚರ್ಚಿಸಿ ಬೇಸಿಗೆಯಲ್ಲಿ ಹೆಚ್ಚು ನೀರು ಹರಿಸಲಾಗುವುದು ಎಂದರು.

ಇದೇ ವೇಳೆ ಬಿಜೆಪಿ ಮಂಡಲ ಅಧ್ಯಕ್ಷ ಗೂಳಿಹಟ್ಟಿ ಜಗದೀಶ್, ಮುಖಂಡರಾದ ಉದ್ಯಮಿ ಸದ್ಗುರು ಪ್ರದೀಪ್, ಲಿಂಗದೇವರು, ಪುರಸಭಾ ಮಾಜಿ ಅಧ್ಯಕ್ಷ ಶ್ರೀನಿವಾಸ್, ಸದಸ್ಯರಾದ ದಾಳಿಂಬೆ ಗಿರೀಶ್, ಮಂಜುನಾಥ್, ನಾಗರಾಜು, ಮುಖಂಡರಾದ ಶಿವು ಮಠ, ಹೇರೂರು ಮಂಜುನಾಥ್, ಬಾಗೂರು ಅರುಣ್, ಪುರುಷೋತ್ತಮ್ ಮತ್ತು ನಾಗರಾಜ್ ಜಮಾಪುರ ಸೇರಿದಂತೆ ನೂರಾರು ಕಾರ್ಯಕರ್ತರು ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ೩೮ ತಿಂಗಳ ಬಾಕಿ ವೇತನ ಪಾವತಿಸುವಂತೆ ಸರ್ಕಾರಿ ಬಸ್ ನಿಲ್ದಾಣದ ಎದುರು ಪ್ರತಿಭಟನೆ



» **ಚಿತ್ರದುರ್ಗ**

ಮೂವತ್ತೆಂಟು ತಿಂಗಳ ಬಾಕಿ ವೇತನ ಹಾಗೂ ಇತರೆ ಪ್ರಮುಖ ಬೇಡಿಕೆಗಳನ್ನು ಈಡೇರಿಸುವಂತೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ವತಿಯಿಂದ ಇಲ್ಲಿನ ಸರ್ಕಾರಿ ಬಸ್ ನಿಲ್ದಾಣದ ಮುಂಭಾಗ ಗುರುವಾರ ಉಪವಾಸ ಧರಣಿ ಹಮ್ಮಿಕೊಳ್ಳಲಾಗಿತ್ತು.ದಿನಾಂಕ : 1-1-2020 ರಿಂದ28-2-2023 ರವರೆಗಿನ ಶೇ.15 ರ ವೇತನ ಹೆಚ್ಚಳದ ಬಾಕಿ ಹಣ ಸಾರಿಗೆ ನೌಕರರಿಗೆ ಬರಬೇಕಿದೆ. ರಾಜ್ಯ ಸರ್ಕಾರಕ್ಕೆ ಹಾಗೂ ಸಾರಿಗೆ ನಿಗಮಗಳ ಆಡಳಿತಕ್ಕೆ ಸಾಕಷ್ಟು ಬಾರಿ ಮನವಿ ಸಲ್ಲಿಸಿದ್ದರೂ ಸ್ಪಂದಿಸದ ಕಾರಣ ಉಪವಾಸ ಧರಣಿ ಸತ್ಯಾಗ್ರಹಕ್ಕೆ ಮುಂದಾಗಿದ್ದಾರೆ.1-1-2024 ರಿಂದ ಮುಂದಿನ ನಾಲ್ಕು ವರ್ಷಗಳ ಅವಧಿಗೆ ಹೊಸ ವೇತನ ಪರಿಷ್ಕರಣೆಯಾಗಬೇಕು. ಕೇಂದ್ರ ಸರ್ಕಾರ ಹಿಟ್ ಅಂಡ್ ರನ್ ಪ್ರಕರಣಗಳಲ್ಲಿ ಕ್ರೂರ ಶಿಕ್ಷೆ ವಿಧಿಸುವಂತ ಕಾನೂನು ತಿದ್ದುಪಡಿ ತಂದಿರುವುದರ ವಿರುದ್ದ ದೇಶಾದ್ಯಂತ ಚಾಲಕರ ಆಕ್ರೋಶ ಭುಗಿಲೆದ್ದಿದೆ. 1-1-2020 ರಿಂದ 28-2-2023 ರ ಅವಧಿಯಲ್ಲಿ ನಿವೃತ್ತರಾದ ನೌಕರರಿಗೆ ವೇತನ ಪರಿಷ್ಕರಣೆ ಅಳವಡಿಸಿ ಕೂಡಲೆ ನಿವೃತ್ತಿ ಸೌಲಭ್ಯಗಳ ಬಾಕಿ ಹಣ ನೀಡಬೇಕು. ಶಕ್ತಿ ಯೋಜನೆಯ ಸಂಪೂರ್ಣ ಅನುದಾನ ಕೂಡಲೆ ಪಾವತಿಯಾಗಬೇಕು. 1-1-2024 ರಿಂದ ಹೊಸ ವೇತನ ಜಾರಿಯಾಗಬೇಕು. 1-1-2020 ರಿಂದ ನಿವೃತ್ತಿಯಾದ ಮತ್ತು ಹೊರ ಹೋಗಿರುವ ನೌಕರರಿಗೆ ಹೊಸ ವೇತನ ಶ್ರೇಣಿ ಕೂಡಲೆ ಜಾರಿಯಾಗಬೇಕೆಂದು ಧರಣಿ ನಿರತರು ಒತ್ತಾಯಿಸಿದರು.ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ಅಧ್ಯಕ್ಷ ಕಾಂತರಾಜ್, ಗೌರವಾಧ್ಯಕ್ಷ ರಹೀಂಸಾಬ್, ಪ್ರಧಾನ ಕಾರ್ಯದರ್ಶಿ ಟಿ.ಅಶೋಕ ಸೇರಿದಂತೆ ಪದಾಧಿಕಾರಿಗಳು ಧರಣಿ ಸತ್ಯಾಗ್ರಹದಲ್ಲಿ ಭಾಗವಹಿಸಿದ್ದರು.

### ಭದ್ರಾಮೇಲ್ದಂಡೆ ಯೋಜನೆ ಕೇಂದ್ರದ ಹಣಕ್ಕಾಗಿ ರೈತರಿಂದ ಪಂಜಿನ ಮೆರವಣಿಗೆ



» **ಚಿತ್ರದುರ್ಗ**

ಭದ್ರಾಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸಿ ಐದು ಸಾವಿರದ ಮುನ್ನೂರು ಕೋಟಿ ರೂ.ಗಳನ್ನು ಕಾಯ್ದಿರಿಸಿರುವ ಕೇಂದ್ರಸರ್ಕಾರಹಣಬಿಡುಗಡೆಮಾಡದಿರುವುದನ್ನು ವಿರೋಧಿಸಿ ಜಿಲ್ಲಾ ಪಂಚಾಯಿತಿಯಲ್ಲಿರುವ ಸಂಸದರ ಕಚೇರಿ ಎದುರು ಕಳೆದ ಹದಿನೆಂಟು ದಿನಗಳಿಂದಲೂ ಪ್ರತಿಭಟನೆ ನಡೆಸುತ್ತಿರುವ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ, ಅಖಂಡ ಕರ್ನಾಟಕ ರೈತ ಸಂಘ ವಿವಿಧ ಜನಪರ, ಪ್ರಗತಿಪರ, ದಲಿತ ಸಂಘಟನೆಗಳಿಂದ ಬುಧವಾರ ನಗರದಲ್ಲಿ ಪಂಜಿನ ಮೆರವಣಿಗೆ ನಡೆಸಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿರುದ್ದ ಧಿಕ್ಕಾರಗಳನ್ನು ಕೂಗಲಾಯಿತು. ಗಾಂಧಿ ವೃತ್ತದಿಂದ ಹೊರಟ ಪಂಜಿನ ಮೆರವಣಿಗೆ ಆನೆಬಾಗಿಲು, ದೊಡ್ಡಪೇಟೆ, ಉಚ್ಚಂಗಿಯಲ್ಲಮ್ಮ ದೇವಸ್ಥಾನದ ಮುಂಭಾಗದಿಂದ ರಂಗಯ್ಯನಬಾಗಿಲು, ಜೋಗಿಮಟ್ಟಿ ವೃತ್ತದ ಮೂಲಕ ಜಿಲ್ಲಾ ಪಂಚಾಯಿತಿ ತಲುಪಿತು. ಪಂಜಿನ ಮೆರವಣಿಗೆಯ ನೇತೃತ್ವ ವಹಿಸಿದ್ದ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ಕಾರ್ಯಾಧ್ಯಕ್ಷ ಈಚಘಟ್ಟದ ಸಿದ್ದವೀರಪ್ಪ ಮಾತನಾಡಿ ಬರಪೀಡಿತ ಪ್ರದೇಶ ಚಿತ್ರದುರ್ಗ ಜಿಲ್ಲೆಗೆ ಭದ್ರಾಮೇಲ್ದಂಡೆ ಯೋಜನೆಯನ್ನು ಜಾರಿಗೆ ತಂದು ನೀರು ಹರಿಸುವಂತೆ ಅನೇಕ ವರ್ಷಗಳಿಂದಲೂ ಹೋರಾಟ ಮಾಡಿಕೊಂಡು ಬರುತ್ತಿದ್ದೇವೆ. ಕೇಂದ್ರದ ಮೇಲೆ ರಾಜ್ಯ ಸರ್ಕಾರ. ರಾಜ್ಯದ ಮೇಲೆ ಕೇಂದ್ರ ಸರ್ಕಾರ ಆಪಾದನೆ ಮಾಡುವುದಲ್ಲಿ ಕಾಳ ಕಳೆಯುತ್ತಿದೆಯೇ ವಿನಃ ಯೋಜನೆಯಂತು ಇನ್ನು ಪೂರ್ಣಗೊಂಡಿಲ್ಲ. ದೇಶಕ್ಕೆ ಅನ್ನ ನೀಡುವ ರೈತರನ್ನು ಎಲ್ಲಾ ಪಕ್ಷಗಳು ಯಾಮಾರಿಸುತ್ತಲೆ ಬರುತ್ತಿವೆ. ಕೂಡಲೆ ಐದು ಸಾವಿರದ ಮುನ್ನೂರು ಕೋಟಿ ರೂ.ಗಳನ್ನು ಬಿಡುಗಡೆಗೊಳಿಸಿ ಭದ್ರಾಮೇಲ್ದಂಡೆ ಯೋಜನೆಯನ್ನು ಜಾರಿಗೆ ತರದಿದ್ದರೆ ಈ ಬಾರಿಯ ಪಾರ್ಲಿಮೆಂಟ್ ಚುನಾವಣೆಯಲ್ಲಿ ಎಲ್ಲಾ ಪಕ್ಷಗಳಿಗೂ ತಕ್ಕ ಪಾಠ ಕಲಿಸಲಾಗುವುದೆಂದು ಎಚ್ಚರಿಸಿದರು.

### ಚುನಾವಣಾ ಮಾದರಿ ನೀತಿ ಸಂಹಿತೆ ಕಟ್ಟುನಿಟ್ಟಾಗಿ ಪಾಲಿಸಬೇಕು: ಜಿಲ್ಲಾಧಿಕಾರಿ ಟಿ.ವೆಂಕಟೇಶ್

# ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಕಾರ್ಯಾಗಾರ

» **ಚಿತ್ರದುರ್ಗ**

ರಾಜಕೀಯ ಪಕ್ಷ ಹಾಗೂ ಅಭ್ಯರ್ಥಿಗಳು ಚುನಾವಣೆ ಸಂದರ್ಭದಲ್ಲಿ ಮಾಡಿದ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ಅವರು ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಸಂಬಂಧ ಮಾದರಿ ನೀತಿ ಸಂಹಿತೆ ಹಾಗೂ ಚುನಾವಣೆ ಖರ್ಚು ವೆಚ್ಚದ ಬಗ್ಗೆ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಏರ್ಪಡಿಸಲಾದ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ರಾಜಕೀಯ ಪಕ್ಷ, ಅಭ್ಯರ್ಥಿಗಳು ಚುನಾವಣೆ ಖರ್ಚು ವೆಚ್ಚಗಳ ನಿಖರ ಮಾಹಿತಿಯನ್ನು ನೀಡಲೇಬೇಕು. ಈ ಕುರಿತು ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಸಮರ್ಪಕವಾಗಿ ಮಾಹಿತಿ ಪಡೆದುಕೊಳ್ಳಬೇಕು. ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸುವ ಅಭ್ಯರ್ಥಿಗೆ ಗರಿಷ್ಠ 95 ಲಕ್ಷ ರೂ. ಗಳ ವೆಚ್ಚ ಮಿತಿ ನಿಗದಿಪಡಿಸಲಾಗಿದೆ. ವೆಚ್ಚಮಿತಿ ಮೀರಿದಲ್ಲಿ, ಅಭ್ಯರ್ಥಿ ತನ್ನ ಅಭ್ಯರ್ಥಿತನವನ್ನೇ ಕಳೆದುಕೊಳ್ಳುತ್ತಾರೆ. ಹಾಗಾಗಿ ಚುನಾವಣಾ ಖರ್ಚು-ವೆಚ್ಚಕ್ಕೆ ಸಂಬಂಧಿಸಿದಂತೆ ಹೆಚ್ಚು ನಿಗಾವಹಿಸಬೇಕು. ರಾಜಕೀಯ ಪಕ್ಷಗಳ ಸಲಹೆ ಪಡದುಕೊಂಡು, ಚುನಾವಣೆಗಳ ಖರ್ಚಿನ ಪಟ್ಟಿಯ ದರವನ್ನು ನಿಗದಿ ಮಾಡಲಾಗಿರುತ್ತದೆ. ನಂತರದಲ್ಲಿ ಅಭ್ಯರ್ಥಿಗಳು ಹಾಗೂ ಪಕ್ಷಗಳು ದರಪಟ್ಟಿಯ ಬಗ್ಗೆ ಆಕ್ಷೇಪ ವ್ಯಕ್ತಪಡಿಸಲು ಅವಕಾಶವಿರುವುದಿಲ್ಲ.ಖರ್ಚು ವೆಚ್ಚದ ಬಗ್ಗೆ ಚುನಾವಣೆ ಆಯೋಗಕ್ಕೆ ಕಡ್ಡಾಯವಾಗಿ ಲೆಕ್ಕ ಒಪ್ಪಿಸಬೇಕು. ತಪ್ಪಿದ್ದಲ್ಲಿ ಅಭ್ಯರ್ಥಿಗಳು ಮುಂದಿನ ಚುನಾವಣೆಗಳಲ್ಲಿ ಸ್ಪರ್ಧಿಸುವ ಅರ್ಹತೆಯನ್ನು ಕಳೆದುಕೊಳ್ಳಬೇಕಾಗುತ್ತದೆ.



ಗೆದ್ದ ಅಭ್ಯರ್ಥಿಯು ನಿಗದಿತ ಕಾಲಮಿತಿಯಲ್ಲಿ ವೆಚ್ಚದ ಲೆಕ್ಕ ನೀಡದಿದ್ದರೆ, ಸದಸ್ಯತ್ವದಿಂದಲೇ ಅನರ್ಹಗೊಳ್ಳುವ ಸಂಭವವಿರುತ್ತದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ನಿಗಧಿತ ಸ್ಥಳಗಳಲ್ಲಿ ಪ್ರಚಾರ ಮಾಡಿ: ರಾಜಕೀಯ ಪಕ್ಷ ಅಥವಾ ಅಭ್ಯರ್ಥಿಗಳು ಜಾಹೀರಾತು, ಹೋರ್ಡಿಂಗ್ಸ್, ಪೋಸ್ಟರ್, ಬ್ಯಾನರ್ಸ್, ಬಂಟಿಂಗ್ಸ್‍ಗಳನ್ನು ನಗರ ಸ್ಥಳೀಯ ಸಂಸ್ಥೆಯವರು ಹಾಗೂ ಗ್ರಾಮ ಪಂಚಾಯಿತಿಯವರು ನಿಗಧಿಪಡಿಸಿದ ಸ್ಥಳಗಳಲ್ಲಿಯೇ ಜಾಹೀರಾತು ಹಾಕಬೇಕು. ನಿಗಧಿತ ಸ್ಥಳಗಳನ್ನು ಹೊರತು ಪಡಿಸಿ ಜಾಹೀರಾತು ಹಾಕಿದರೆ ಅದು ನೀತಿ ಸಂಹಿತೆಯ ಉಲ್ಲಂಘನೆಯಾಗಲಿದೆ. ಕಡ್ಡಾಯವಾಗಿ ನಿಗಧಿಪಡಿಸಿದ ಜಾಗದಲ್ಲಿಯೇ ಪ್ರಚಾರ ಮಾಡಬೇಕು. ಇದಕ್ಕೆ ಅನುಮತಿ ಪಡೆಯುವುದು ಅಷ್ಟೇ ಮುಖ್ಯವಾಗಿದೆ. ನಿಗಧಿಗೊಳಿಸದೇ ಇರುವ ಸಾರ್ವಜನಿಕ ಸ್ಥಳಗಳಲ್ಲಿ ಅನುಮತಿ ಇಲ್ಲದೇ ಪ್ರಚಾರ ಮಾಡಿದರೆ ಪ್ರಕರಣ ದಾಖಲಿಸಲಾಗುವುದು. ಧಾರ್ಮಿಕ ಕೇಂದ್ರಗಳಾದ ದೇವಸ್ಥಾನ, ಮಸೀದಿ, ಚರ್ಚ್‍ಗಳಲ್ಲಿ ಚುನಾವಣಾ ಪ್ರಚಾರ ಕಾರ್ಯ ಮಾಡುವುದು ನೀತಿ ಸಂಹಿತೆ ಉಲ್ಲಂಘನೆಯಾಗುತ್ತದೆ. ಜಾತ್ರೆ, ಉತ್ಸವಗಳ ಜಾಗಗಳನ್ನು ಪ್ರಚಾರಕ್ಕಾಗಿ ಬಳಸಿಕೊಳ್ಳಬಾರದು. ಮಾದರಿ ನೀತಿ ಸಂಹಿತೆ ಉಲ್ಲಂಘನೆ ಪ್ರಕರಣ ಆಗದಂತೆ ಹಾಗೂ ಚುನಾವಣಾ ವೆಚ್ಚ ಮಿತಿ ಮೀರದಂತೆ ನಿಗಾವಹಿಸಬೇಕು. ಮಕ್ಕಳನ್ನು ಪ್ರಚಾರಕ್ಕಾಗಿ ಬಳಸಬಾರದು. ಚುನಾವಣೆ ಅಕ್ರಮಗಳು ಕಂಡುಬಂದರೆ ಪ್ರಜಾಪ್ರತಿನಿಧಿ ಕಾಯ್ದೆ ಹೊರತಾಗಿ, ಐ.ಪಿ.ಸಿ, ಸಿ.ಆರ್.ಪಿಸಿ, ಅಬಕಾರಿ, ಮೋಟಾರು ವಾಹನ ಕಾಯ್ದೆ ಅಡಿಯಲ್ಲೂ ಪ್ರಕರಣಗಳನ್ನು ದಾಖಲಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಸಿದರು.

ಜಿ.ಪಂ ಮುಖ್ಯ ಲೆಕ್ಕಾಧಿಕಾರಿ ಹಾಗೂ ಜಿಲ್ಲಾ ವೆಚ್ಚ ಉಸ್ತುವಾರಿ ಕೋಶದ ನೋಡಲ್ ಅಧಿಕಾರಿ ಡಿ.ಆರ್.ಮಧು, ಮಾದರಿ ನೀತಿ ಸಂಹಿತೆ ಹಾಗೂ ಚುನಾವಣಾ ಖರ್ಚು ವೆಚ್ಚದ ನಿರ್ವಹಣೆ ಬಗ್ಗೆ ತರಬೇತಿ ನೀಡಿ, ಮೊದಲ ಹಂತದಲ್ಲಿ ಎಲ್ಲಾ ರಾಜಕೀಯ ಪಕ್ಷಗಳು ಹಾಗೂ ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗುತ್ತಿದೆ. ಚುನಾವಣೆ ಘೋಷಣೆಯಾದ ಬಳಿಕ ನೀತಿ ಸಂಹಿತೆ ಜಾರಿಯಾಗಲಿದೆ. ರಾಜಕೀಯ ಪಕ್ಷ ಹಾಗೂ ಅಭ್ಯರ್ಥಿಗಳು ಮಾದರಿ ನೀತಿ ಸಂಹಿತೆಯನ್ನು ಪಾಲಿಸಬೇಕಾಗುತ್ತದೆ. ಚುನಾವಣೆಗೆ ಸ್ಪರ್ಧಿಸುವ ಅಭ್ಯರ್ಥಿಗಳ ಮೇಲಿನ ಎಲ್ಲಾ ಕ್ರಿಮಿನಲ್ ಪ್ರಕರಣಗಳ ಮಾಹಿತಿಯನ್ನು ನಿಗದಿತ ನಮೂನೆಯೊಳಗೆ ರಾಜಕೀಯ ಪಕ್ಷಗಳು ಹಾಗೂ ಅಭ್ಯರ್ಥಿಗಳು ಪತ್ರಿಕೆಗಳಲ್ಲಿ ಪ್ರಕಟಿಸಬೇಕು. ಇದೇ ಮಾಹಿತಿ ಚುನಾವಣೆ ಆಯೋಗಕ್ಕೂ ನೀಡುವುದು ಕಡ್ಡಾಯವಾಗಿದೆ ಎಂದರು.

ಚುನಾವಣಾ ಖರ್ಚು ವೆಚ್ಚಗಳ ನಿರ್ವಹಣೆ ಬಗ್ಗೆ ಭಾರತ ಚುನಾವಣಾ ಆಯೋಗ ಈಗಾಗಲೆ ಮಾರ್ಗಸೂಚಿಗಳನ್ನು ಪ್ರಕಟಿಸಿದೆ. ಇದನ್ನು ಎಲ್ಲ ರಾಜಕೀಯ ಪಕ್ಷ ಹಾಗೂ ಅಭ್ಯರ್ಥಿಗಳು ಪಡೆದು ಸಮಗ್ರವಾಗಿ ಅರಿತುಕೊಳ್ಳಬೇಕು. ನಂತರದಲ್ಲಿ ಮಾಹಿತಿಯ ಕೊರತೆಯಿಂದ ತಪ್ಪಾಗಿದೆ ಎಂದು ಯಾರೂ ಕೂಡ ಸಬೂಬು ಹೇಳಿ, ಜಾರಿಕೊಳ್ಳಲು ಅವಕಾಶವಿಲ್ಲ. ಭಾರತ ಚುನಾವಣಾ ಆಯೋಗ ಚುನಾವಣಾ ವೆಚ್ಚದ ವೀಕ್ಷಣೆಗಾಗಿ ಐ.ಆರ್.ಎಸ್ ಅಧಿಕಾರಿಗಳನ್ನು ವೀಕ್ಷಕರನ್ನಾಗಿ ನೇಮಿಸುತ್ತದೆ. ಪ್ರತಿ ಅಭ್ಯರ್ಥಿಯು ನಾಮಪತ್ರ ಸಲ್ಲಿಸುವ ದಿನಕ್ಕೆ, ಕನಿಷ್ಠ ಒಂದು ದಿನ ಮುಂಚಿತವಾಗಿ ಚುನಾವಣೆ ವೆಚ್ಚಗಳ ನಿರ್ವಹಣೆಗಾಗಿ ಪ್ರತ್ಯೇಕ ಬ್ಯಾಂಕ್ ಖಾತೆ ತೆರೆಯಬೇಕು. ನಾಮಪತ್ರ ಸಲ್ಲಿಸಿ ಅಭ್ಯರ್ಥಿಗಳಿಗೆ ದೈನಂದಿನ ಖರ್ಚು ವೆಚ್ಚಗಳ ನಮೂದಿಸಲು ಬಳಿ ಬಣ್ಣದ, ಹಣಕಾಸಿನ ವಹಿ ನಿರ್ವಹಣೆಗೆ ಗುಲಾಬಿ ಬಣ್ಣದ ಹಾಗೂ ಬ್ಯಾಂಕ್‍ಗಳ ವ್ಯವಹಾರದ ನೊಂದಣಿಗೆ ಹಳದಿ ಬಣ್ಣದ ರಿಜಿಸ್ಟರ್ ನೀಡಲಾಗುವುದು. ಇವುಗಳನ್ನು ತಪ್ಪದೇ ಅಭ್ಯರ್ಥಿಗಳು ಭರ್ತಿ ಮಾಡಬೇಕು. ಚುನಾವಣಾ ಸಂದರ್ಭದಲ್ಲಿ ಪಕ್ಷ ಹಾಗೂ ಅಭ್ಯರ್ಥಿಗಳ ಖರ್ಚು ವೆಚ್ಚದ ಬಗ್ಗೆ ಪ್ರತ್ಯೇಕ ತಂಡಗಳು ತನ್ನದೇ ಆದ ಶ್ಯಾಡೋ ರಿಜಿಸ್ಟರ್ ನಿರ್ವಹಣೆ ಮಾಡುತ್ತವೆ. ಪ್ರತಿಯೊಂದು ಸಭೆ-ಸಮಾರಂಭದ ಬಗ್ಗೆ ವಿಡಿಯೋ ಚಿತ್ರೀಕರಣ ಮಾಡಿ ವೆಚ್ಚವನ್ನು ನಮೂದಿಸಲಾಗುವುದು ಎಂದು ಜಿ.ಪಂ ಮುಖ್ಯ ಲೆಕ್ಕಾಧಿಕಾರಿ ಡಿ.ಆರ್.ಮಧು ತಿಳಿಸಿದರು.

ಈ ಸಂದರ್ಭದಲ್ಲಿ ಜಿ.ಪಂ.ಸಿಇಓ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ , ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹೆಚ್.ಜೆ.ಕುಮಾರಸ್ವಾಮಿ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್, ಜಿಲ್ಲಾ ಮಾಸ್ಟರ್ ತರಬೇತುದಾರ ಹಾಗೂ ಚಿತ್ರದುರ್ಗ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್, ಜೆಡಿಎಸ್ ಜಿಲ್ಲಾ ಮಹಾ ಪ್ರಧಾನ ಕಾರ್ಯದರ್ಶಿ ಗೋಪಾಲಸ್ವಾಮಿ ನಾಯಕ, ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಡಿ.ಎನ್.ಮೈಲಾರಪ್ಪ, ಕಾರ್ಯದರ್ಶಿ ಸಿ.ಜೆ.ನಾಸಿರುದ್ದೀನ್, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನರೇಂದ್ರ ಹೊನ್ನಾಳ್, ಸಿಪಿಐಎಂ ಡಿಓಸಿ ಗೌಸ್‍ಪೀರ್ ಸೇರಿದಂತೆ ಮತ್ತಿತರರು ಇದ್ದರು.

## ನಗರದ ತರಕಾರಿ ಮಾರುಕಟ್ಟೆಯಲ್ಲಿ ರೈತರಿಂದ ಹೆಚ್ಚಿನ ಜಕಾತಿ ವಸೂಲಿ ರೈತ ಸಂಘ ಪ್ರತಿಭಟನೆ

» **ಚಿತ್ರದುರ್ಗ**

ತರಕಾರಿ ಮಾರುಕಟ್ಟೆಯಲ್ಲಿ ಜಕಾತಿ ಶುಲ್ಕ ಕಡಿಮೆ ಮಾಡುವಂತೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ವತಿಯಿಂದ ನಗರಸಭೆ ಎದುರು ಗುರುವಾರ ಪ್ರತಿಭಟನೆ ನಡೆಸಿ ವ್ಯವಸ್ಥಾಪಕಿ ಮಂಜುಳರವರಿಗೆ ಮನವಿ ಸಲ್ಲಿಸಲಾಯಿತು.

ರೈತರು ಮಾರುಕಟ್ಟೆಗೆ ಹೂವು, ಹಣ್ಣು, ತರಕಾರಿ, ಸೊಪ್ಪುಗಳನ್ನು ದಿನನಿತ್ಯವು ತರುತ್ತಾರೆ. ನಗರಸಭೆಯವರು ದುಬಾರಿ ಜಕಾತಿ ವಸೂಲು ಮಾಡುತ್ತಿದ್ದು, ಮೊದಲೆ ಬರಗಾಲದಲ್ಲಿ ಸಂಕಷ್ಟ ಅನುಭವಿಸುತ್ತಿರುವ ರೈತರಿಗೆ ಗಾಯದ ಮೇಲೆ ಬರೆ ಎಳೆದಂತಾಗುತ್ತದೆ. ನಗರದ ಹೊರ ವಲಯ ಚಳ್ಳಕೆರೆ ಬೈಪಾಸ್ ಸಮೀಪ ಸಾರ್ವಜನಿಕ ಶೌಚಾಲಯ ನಿರ್ಮಿಸಬೇಕು. ಚಳ್ಳಕೆರೆ, ಬೆಂಗಳೂರು, ಹಿರಿಯೂರು ಕಡೆ ಪ್ರಯಾಣಿಸುವವರು ಇಲ್ಲಿ ಶೌಚಾಲಯವಿಲ್ಲದ ಪರದಾಡುವಂತಾಗಿದೆ. ರೈತರು, ಕೂಲಿ



ಕಾರ್ಮಿಕರು, ಬೀದಿ ಬದಿ ವ್ಯಾಪಾರಿಗಳಿಗೂ ತೊಂದರೆಯಾಗುತ್ತಿದೆ.

ನಗರಸಭೆಯವರು ಇತ್ತ ಗಮನ ಹರಿಸಿ ನಮ್ಮ ಬೇಡಿಕೆಗಳನ್ನು ಈಡೇರಿಸಬೇಕೆಂದು ಪ್ರತಿಭಟನಾಕಾರರು ಪಟ್ಟು ಹಿಡಿದರು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ವಾಸುದೇವ ಮೇಟಿ ಬಣದ ಜಿಲ್ಲಾಧ್ಯಕ್ಷ ಲಕ್ಷ್ಮಿಕಾಂತ್, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಲೋಲಾಕ್ಷಮ್ಮ, ತಾಲ್ಲೂಕು ಅಧ್ಯಕ್ಷೆ ಪವಿತ್ರ ಬಿ.ಕೆ. ನಗರ ಘಟಕದ ಅಧ್ಯಕ್ಷೆ ಮಂಜುಳ, ಜಯಲಕ್ಷ್ಮಿ ಎನ್. ವಿಜಯಮ್ಮ, ರುದ್ರಮ್ಮ, ಕಣಿವೆಮಾರಮ್ಮ ಸಂಘದ ಅಧ್ಯಕ್ಷ ತಿಪ್ಪೇಸ್ವಾಮಿ, ನಾಗರಾಜ, ಮಂಜುನಾಥ, ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಸಂವಿಧಾನ ಜಾಗೃತಿ ಕಾಲ್ನಡಿಗೆ ಜಾಥಾ



» **ಚಿತ್ರದುರ್ಗ**

ಚಿತ್ರದುರ್ಗ ನಗರದ ಒನಕೆ ಓಬವ್ವ ವೃತ್ತದಲ್ಲಿ ಸಂವಿಧಾನ ಜಾಗೃತಿ ಕಾಲ್ನಡಿಗೆ ಜಾಥಾಕ್ಕೆ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಅವರು ಗುರುವಾರ ಚಾಲನೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ ಭೀಮ್ ಬಳಗದ ವತಿಯಿಂದ ಸಂವಿಧಾನದ ಮಹತ್ವ ಕುರಿತು ಅರಿವು ಮೂಡಿಸುವ ನಿಟ್ಟಿನಲ್ಲಿ ಚಿತ್ರದುರ್ಗ ನಗರದ ಪ್ರಮುಖ ರಸ್ತೆಗಳಲ್ಲಿ ಸಂವಿಧಾನ ಜಾಗೃತಿ ಕಾಲ್ನಡಿಗೆ ಜಾಥಾ ಕಾರ್ಯಕ್ರಮ ನಡೆಯಿತು. ಸಂವಿಧಾನ ಜಾಗೃತಿ ಕಾಲ್ನಡಿಗೆ ಜಾಥಾವು ಜಿಲ್ಲಾಧಿಕಾರಿ ವೃತ್ತ (ಒನಕೆ ಓಬವ್ವ ವೃತ್ತ) ದಿಂದ ಪ್ರಾರಂಭಗೊಂಡು ಕನಕ ಸರ್ಕಲ್ ಮೂಲಕ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದವರೆಗೂ ಅದ್ದೂರಿ ಮೆರವಣಿಗೆ ನಡೆಯಿತು. ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಓ.ಪರಮೇಶ್ವರಪ್ಪ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಕೃಷ್ಣಮೂರ್ತಿ, ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಭೀಮಯ್ಯ ಹಾಗೂ ವಿವಿಧ ಸಂಘಟನೆಗಳ ಮುಖ್ಯಸ್ಥರು , ಸಾರ್ವಜನಿಕರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ನಾಯಕನಹಟ್ಟಿ ತಿಪ್ಪೇರುದ್ರಸ್ವಾಮಿ ಜಾತ್ರೆ: 24 ರಂದು ಪೂರ್ವ ಭಾವಿ ಸಭೆ

**ನಾಯಕನಹಟ್ಟಿ:** ಶ್ರೀ ಗುರು ತಿಪ್ಪೇರುದ್ರಸ್ವಾಮಿಯ ಮಹ ರಥೋತ್ಸವದ ವೈಭವಕ್ಕೆ ಮಾರ್ಚ್ 26 ರಂದು ಜರುಗಲಿದೆ. ಜಾತ್ರೆಗೆ ಸಿದ್ದಂತೆ ಪ್ರಾರಂಭಿಸಲು ಸಂಪ್ರದಾಯದಂತೆ ಫೆಬ್ರವರಿ 24 ರಂದು ಪೂರ್ವ ಸಿದ್ದತೆಯ ಸಭೆ ಆಯೋಜಿಸಲಾಗಿದೆ. ಶ್ರೀ ಗುರು ತಿಪ್ಪೇರುದ್ರಸ್ವಾಮಿ ದೇವಾಲಯದ ಒಳಮಠ ಸಮುದಾಯದ ಭವನದಲ್ಲಿ ಫೆಬ್ರವರಿ 24 ರಂದು ಸಂಜೆ 4:00 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಮೊಳಕಾಲ್ಮೂರು ಕ್ಷೇತ್ರದ ಶಾಸಕ ಎನ್.ವೈ.ಗೋಪಾಲಕೃಷ್ಣ, ನೇತೃತ್ವದಲ್ಲಿ ಸಭೆ ನಡೆಯಲಿದೆ. ಚಿತ್ರದುರ್ಗದ ಜಿಲ್ಲಾಧಿಕಾರಿ ವೆಂಕಟೇಶ್ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ಸಭೆಯಲ್ಲಿ ಕುಡಿಯುವ ನೀರಿ ಮತ್ತು ನೈರ್ಮಲ್ಯ ಭದ್ರತೆ ವಿಷಯಗಳು ಚರ್ಚೆಯಾಗಲಿದೆ. ಮಾರ್ಚ್ 26 ರಂದು ಚಿತ್ತಾ ನಕ್ಷತ್ರದ ಸಮಯದಲ್ಲಿ ಪವಾಡ ಪುರುಷ ಶ್ರೀ ತಿಪ್ಪೇರುದ್ರಸ್ವಾಮಿಯ ಜಾತ್ರೆ ಮಹೋತ್ಸವವನ್ನು ವಿಜೃಂಭಣೆಯಿಂದ ಭಕ್ತರ ಜಯ ಘೋಷದೊಂದಿಗೆ ನಡೆಯಲಿದೆ.

## ಪ್ರಮುಖ ಸುದ್ದಿ

### ಸಂಚಾರ ವ್ಯವಸ್ಥೆಯನ್ನು ಸರಿಪಡಿಸುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಕಾರ್ಯರೂಪ

# ರಿಕ್ಷಾ ಚಾಲಕರಿಗೆ ಸಂಚಾರಿ ನಿಯಮ ಪಾಲನೆಗೆ ಸೂಚನೆ

» **ಚಳ್ಳಕೆರೆ**

ಚಳ್ಳಕೆರೆ ನಗರದ ಸಂಚಾರಿ ವ್ಯವಸ್ಥೆಯನ್ನು ಸುಗಮಗೊಳಿಸಲುಜಿಲ್ಲಾರಕ್ಷಣಾಧಿಕಾರಿಗಳ ಮಾರ್ಗದರ್ಶನದಲ್ಲಿ ಪೊಲೀಸ್ ಇಲಾಖೆ ಕೆಲವೊಂದು ತುರ್ತು ಕ್ರಮಗಳನ್ನು ಸಾರ್ವಜನಿಕರ ಹಿತದೃಷ್ಠಿಯಿಂದ ಅನುಸರಿಸುತ್ತಿದ್ದು, ಆಟೋಚಾಲಕರು ಸಹ ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಿ ಎಂದು ಚಳ್ಳಕೆರೆ ಠಾಣೆಯ ನೂತನ ವೃತ್ತ ನಿರೀಕ್ಷಕ ಕೆ.ಕುಮಾರ್ ತಿಳಿಸಿದರು.

ಅವರು, ಗುರುವಾರ ಪೊಲೀಸ್ ಠಾಣಾ ಆವರಣದಲ್ಲಿ ನಗರದ ಆಟೋಚಾಲಕ ಸಭೆಯನ್ನುಹಮ್ಮಿಕೊಂಡಿದ್ದು,ಈಸಭೆಯಲ್ಲಿ ನಗರದ ಒಟ್ಟು 12 ಆಟೋನಿಲ್ದಾಣಗಳ ಚಾಲಕರು, ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಭಾಗವಹಿಸಿದ್ದರು.

ಆಟೋರಿಕ್ಷಾ ಚಾಲಕರಿಗೆ ಸೂಚನೆ ನೀಡಿದ ಅವರು, ನಗರದ ಖಾಸಗಿ ಬಸ್ ನಿಲ್ದಾಣವೂ ಸೇರಿದಂತೆ ವಿವಿಧ ವೃತ್ತ ವ್ಯಾಪ್ತಿಯಲ್ಲಿ ಆಟೋರಿಕ್ಷಾ ಚಾಲಕರು



ತಮಗೆ ಮನಬಂದಂತೆ ನಿಲ್ಲಿಸುತ್ತಿದ್ದಾರೆ, ಖಾಸಗಿ ಬಸ್‍ಗಳು ಆಗಮಿಸುತ್ತಿದ್ದಂತೆ ಬಸ್ ಸುತ್ತಲು ಆಟೋಗಳು ನಿಲ್ಲುತ್ತಿವೆ, ಸಾರ್ವಜನಿಕರು ಹಾಗೂ ವಾಹನಗಳು ಓಡಾಡುವುದು ಇದರಿಂದ ಹೆಚ್ಚು ತೊಂದರೆಯಾಗುತ್ತಿದೆ. ಯಾರೂ ಸಹ ನಿಯಮಗಳನ್ನು ಪಾಲಿಸದೆ ಉಲ್ಲಂಘನೆ ಮಾಡುತ್ತಿರುವುದು ಬೆಳಕಿಗೆ ಬಂದಿದೆ. ಈ ಬಗ್ಗೆ ಸಾರ್ವಜನಿಕರೂ ಸಹ ಅನೇಕ ಆಕ್ಷೇಪಗಳನ್ನು ವ್ಯಕ್ತಪಡಿಸಿ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ಆದ್ದರಿಂದ ಎಲ್ಲಾ ಆಟೋರಿಕ್ಷಾ ಚಾಲಕರು ನಿಗದಿತ ಸ್ಥಳದಲ್ಲೇ ತಮ್ಮ ಆಟೋಗಳನ್ನು ನಿಲ್ಲಿಸಬೇಕು, ಕಡ್ಡಾಯವಾಗಿ ಸಮವಸ್ತ್ರ ಧರಿಸಬೇಕು, ಪ್ರಯಾಣಿಕರೊಂದಿಗೆ ಸೌಹಾರ್ಧತೆಯಿಂದ ವರ್ತಿಸಿ, ಯಾರಾದರೂ ಅಪರಿಚಿತ ವ್ಯಕ್ತಿಗಳು ಕಂಡುಬಂದರೆ ಕೂಡಲೇ ಮಾಹಿತಿ ನೀಡುವಂತೆ ತಿಳಿಸಿದರು. ಪಿಎಸ್‍ಐಗಳಾದ ಕೆ.ಸತೀಶ್‍ನಾಯ್ಕ, ಧರಪ್ಪಬಾಳಪ್ಪ ದೊಡ್ಡಮನಿ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಸಂವಿಧಾನ ಜಾಗೃತಿ ಜಾಥಾ: ನೇರ ಪ್ರಸಾರ ವೀಕ್ಷಣೆಗೆ ಅವಕಾಶ

» ಚಿತ್ರದುರ್ಗ

ಸಂವಿಧಾನ ದಿನಾಚರಣೆ ಪ್ರಯುಕ್ತ ಬೆಂಗಳೂರಿನ ಅರಮನೆ ಮೈದಾನದಲ್ಲಿ ಫೆ.24 ಮತ್ತು 25ರಂದು "ಸಂವಿಧಾನ ಜಾಗೃತಿ ಜಾಥಾ" ಕಾರ್ಯಕ್ರಮ ನಡೆಯಲಿದ್ದು, ಈ ಕಾರ್ಯಕ್ರಮದ ನೇರ ಪ್ರಸಾರ ವೀಕ್ಷಿಸಲು ಚಿತ್ರದುರ್ಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಅವಕಾಶ ಕಲ್ಪಿಸಲಾಗಿದೆ.

ಸಂವಿಧಾನ ಜಾಗೃತಿ ಜಾಥಾ ಸಮಾವೇಶದ ನೇರ ಪ್ರಸಾರ ಹಾಗೂ ಸಂವಿಧಾನದ ಕುರಿತು ಇತರೆ ಕಾರ್ಯಕ್ರಮಗಳನ್ನು ಎಲ್ಲಾ ಸಾರ್ವಜನಿಕರು ಫೆ.24 ಮತ್ತು 25ರಂದು ಎರಡು ದಿನ ಚಿತ್ರದುರ್ಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿದ್ದು, ನೇರ ಪ್ರಸಾರವನ್ನು ಎಲ್ಲಾ ಸಾರ್ವಜನಿಕರು ಆಗಮಿಸಿ ವೀಕ್ಷಿಸುವಂತೆ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಕೋರಿದ್ದಾರೆ.

### ಗಾರ್ಮೆಂಟ್ಸ್ ಕೆಲಸಕ್ಕೆ ಹೋಗಿದ್ದ ಮಹಿಳೆ ಕಾಣೆ

» ಚಿತ್ರದುರ್ಗ

ತಾಲ್ಲೂಕಿನ ಚಿಕ್ಕಬೆನ್ನೂರು ಗ್ರಾಮದಿಂದ ನಗರದ ಗಾರ್ಮೆಂಟ್ಸ್ ಕಂಪನಿಯಲ್ಲಿ ಪ್ರತಿನಿತ್ಯ ಕೆಲಸಕ್ಕೆ ಬರುತ್ತಿದ್ದ, 26 ವರ್ಷದ ಚೈತ್ರಾ ಫೆ.14 ರಿಂದ ನಿಗೂಢವಾಗಿ ಕಾಣೆಯಾಗಿದ್ದಾರೆ. ಈ ಕುರಿತು ಚೈತ್ರಾ ಅವರ ತಂದೆ ಹಾಗೂ ಪತಿ ವೆಂಕಟೇಶ್ ಭರಮಸಾಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಎಂದಿನಂತೆ ಫೆ.14 ರಂದು ಗಾರ್ಮೆಂಟ್ಸ್ ಕಂಪನಿಯ ಕೆಲಸಕ್ಕೆ ಮನೆಯಿಂದ ಹೋಗಿದ್ದ ಚೈತ್ರಾ, ತಡರಾತ್ರಿಯಾದರೂ ಮನೆಗೆ ಹಿಂದಿರುಗಿರಲಿಲ್ಲ. ಇದರಿಂದ ಗಾಬರಿಗೊಂಡ ತಂದೆ ಹಾಗೂ ಪತಿ ವೆಂಕಟೇಶ್, ಕೆಲಸದ ಸ್ಥಳ, ಅಕ್ಕಪಕ್ಕದ ಗ್ರಾಮಗಳಲ್ಲಿ ಹುಡಿಕಿ, ಸಂಬಂಧಿಕರ ಬಳಿ ವಿಚಾರಿಸಿದ್ದಾರೆ. ಆದರೂ ಚೈತ್ರಾಳ ಸುಳಿವು ಸಿಗಿದ್ದಾಗ ಫೆ.15 ರಂದು ಭರಮಸಾಗರ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. 8 ವರ್ಷಗಳ ಹಿಂದೆ ವೆಂಕಟೇಶ್ ಹಾಗೂ ಚೈತ್ರಾ ಪರಸ್ಪರ ಪ್ರೀತಿಸಿ ಮದುವೆಯಾಗಿದ್ದರು. ಇವರಿಗೆ 3 ಜನ ಮಕ್ಕಳಿದ್ದಾರೆ. ಚೈತ್ರ 5.2 ಅಡಿ ಎತ್ತರ, ದುಂಡು ಮುಖ, ಗೋಧಿ ಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಕಾಣೆಯಾದ ಸಮಯದಲ್ಲಿ ಕೇಸರಿ ಕಲರ್ ಟಾಪ್, ಬಾದಾಮಿ ಕಲರ್ ಪ್ಯಾಂಟ್‌ನ ಚೂಡಿದಾರ ಧರಿಸಿರುತ್ತಾರೆ. ಈ ಮೇಲ್ಕಂಡ ಚಹರೆಯುಳ್ಳ ಮಹಿಳೆಯ ಕುರಿತು ಮಾಹಿತಿ ಕಂಡು ಬಂದಲ್ಲಿ ಭರಮಸಾಗರ ಪೋಲಿಸ್ ಠಾಣೆಗೆ ಸಂಪರ್ಕಿಸಬೇಕೆಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಫೆ.28 ರಂದು ರಾಷ್ಟ್ರೀಯ ವಿಜ್ಞಾನ ದಿನಾಚರಣೆ

» ಚಿತ್ರದುರ್ಗ

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ವತಿಯಿಂದ ಫೆ. 28 ರ ಬುಧವಾರದಂದು ಬೆಂಗಳೂರಿನ ತೋಟಗಾರಿಕಾ ವಿಜ್ಞಾನಗಳ ಕಾಲೇಜು ಆವರಣದಲ್ಲಿನ ಅಕಾಡೆಮಿ ಕಛೇರಿಯ, ಯು.ಆರ್.ರಾವ್ ವಿಜ್ಞಾನ ಭವನದಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆಯನ್ನು ಆಯೋಜಿಸಲಾಗಿದೆ. "Indigenous Techologies for societal Devolopment" (ಸಮಾಜದ ಬೆಳವಣಿಗೆಗೆ ಸ್ಥಳೀಯ ತಂತ್ರಜ್ಞಾನಗಳು) ಎಂಬ ವಿಷಯದ ಹಿನ್ನಲೆಯಲ್ಲಿ ದಿನಾಚರಣೆ ಆ ಚರಿಸಲಾಗುತ್ತಿದ್ದು, ಎಲ್ಲಾ ಪದವಿ ಹಾಗೂ ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳು ದಿನಾಚರಣೆಯಲ್ಲಿ ಭಾಗವಹಿಸಬಹುದು. ಕಾರ್ಯಕ್ರಮದಲ್ಲಿ ಚಿತ್ರಕಲೆ ಸ್ಪರ್ಧೆ ಏರ್ಪಡಿಸಲಾಗಿದ್ದು, ವಿಜೇತರಿಗೆ ನಗದು ಬಹುಮಾನಗಳನ್ನು ವಿತರಿಸಲಾಗುವುದು. ಭಾಗವಹಿಸಲು ಇಚ್ಛಿಸುವ ವಿದ್ಯಾರ್ಥಿಗಳು http://forms.gel/e5UbmGWkkaC1utgLA ತಂತ್ರಾಂಶದ ಮೂಲಕ ನೊಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಅಕಾಡೆಮಿಯ ವೈಬ್‌ಸೈಟ್ http://www.kstacademy.in ಗೆ ಸಂಪರ್ಕಿಸಬುದು ಎಂದು ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಎ.ಎಂ ರಮೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


### 24ರಂದು ರಂಗನಾಥ ಸ್ವಾಮಿ ಹರಿಸೇವೆ ಉತ್ಸವ

» ಹಿರಿಯೂರು

ತಾಲೂಕಿನ ಬಬ್ಬೂರು ಬಳಿ ನೆಲೆಸಿರುವ ಶ್ರೀ ಲಕ್ಷ್ಮಿ ಕಂಬದ ರಂಗನಾಥ ಸ್ವಾಮಿ ದೇವರ ಹರಿಸೇವೆ ಉತ್ಸವವು ಪ್ರತಿ ವರ್ಷದಂತೆ ಈ ವರ್ಷವೂ ಇದೇ 24ರ ಶನಿವಾರ ಬೆಳಿಗ್ಗೆ ಭಕ್ತಿ ಭಾವದಿಂದ ಜರುಗಲಿದೆ. ಇದರ ಅಂಗವಾಗಿ ಶ್ರೀ ಲಕ್ಷ್ಮಿ ಕಂಬದ ರಂಗನಾಥ ಸ್ವಾಮಿ ಆಂಜನೇಯ ಸ್ವಾಮಿ ಶ್ರೀ ಮಹಾಲಕ್ಷ್ಮಿ ದೇವರುಗಳಿಗೆ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ ರಂಗನಾಥ ಸ್ವಾಮಿಗೆ ಅರ್ಚನೆ ಅಭಿಷೇಕ ಲೋಕ ಕಲ್ಯಾಣಾರ್ಥವಾಗಿ ವಿಶೇಷ ಪೂಜಾ ಕಾರ್ಯಕ್ರಮ ಮಹಾಮಂಗಳಾರತಿ ನಂತರ ತೀರ್ಥ ಪ್ರಸಾದ ವಿನಿಯೋಗ ಹಾಗೂ ಅನ್ನಸಂತರ್ಪಣೆ ಏರ್ಪಡಿಸಲಾಗಿದೆ.

# ಬಿಸಿಲಿನ ಜಳಕ್ಕೆ ನೀರು, ನೆರಳಿನ ದಾಹ-ಎದುರಿದ ಮೂಕ ಪ್ರಾಣಿಗಳು

## ಬರಕ್ಕೆ ಸೂರ್ಯನ ದಗೆ ಅಬ್ಬರ- ಈ ವರ್ಷವಾದರೂ ಹುಯ್ಯೋ.......ಹುಯ್ಯೋ.......ಮಳೆರಾಯ




» ಮಹದೇವಪುರ ಶಿವಮೂರ್ತಿ.

ಪರಶುರಾಂಪುರ:ಬೇಸಿಗೆಯ ಅಬ್ಬರವು ಫೆಬ್ರವರಿಯಲ್ಲೇ ನೆತ್ತಿ ಸುಡುವ ಬಿಸಿಲಿ ಶಾಖದ ಜತೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವುದರಿಂದ ಈ ದಗೆಯನ್ನ ತಾಳರಾದೆ ಮೂಕ ದನ,ಕುರಿ,ಮೇಕೆ ಎಮ್ಮೆ ಇನ್ನುಳಿದ ಜೀವಸಂಕುಲಗಳು ಬೆಟ್ಟಗುಡ್ಡಾ,ಹೊಲಗಳಲ್ಲಿರುವ ಒಣ ಇಲ್ಲವೆ ಅರೆಬರೆ ಹಸಿರಿನ ಗಿಡಗಳ ನೆರಳಿನ ಆಶ್ರಯ ಪಡುವಂತಾಗಿದೆ.

ರಾಜ್ಯ ಹಾಗು ಚಿತ್ರದುರ್ಗ ಜಿಲ್ಲೆ ಸೇರಿದಂತೆ ವಿವಿದ ಕಡೆಗಳಲ್ಲಿ ಬಿಸಿಲಿನ ತಾಪಮಾನ ಹೆಚ್ಚಾಗಿದ್ದು,ಹೀಗ ಸು.34 ಇದೆ.ಹೀಗೆ ಮುಂದುವರೆದರೆ 40 ಸೆಲ್ಸಿಯಸ್‌ನ ಗಡಿ ತಲುಪುವುದರಲ್ಲಿ ಎರಡು ಮಾತಿಲ್ಲಾ ಎಂಬುವ ದೃಶ್ಯ ಕಂಡರು ಆಶ್ಚರ್ಯ ಪಡಬೇಕಿಲ್ಲ.

ಬಿಸಿಲ ದಗೆ ದಿನೇ ದಿನೇ ಹೆಚ್ಚಾಗುವುದರ ಹಿನ್ನಲೆ ಕುರಿ,ಮೇಕೆ,ದನ,ಎಮ್ಮೆಗಳು ಬೆಳಗ್ಗೆ ಸಮಯದಲ್ಲಿ ಮೇವಿಗೆ ಬಯಲಿಗೆ,ಮಧ್ಯಾಹ್ನ ನೆರಳಿ ಕರೆತರುವ ಪರಿಸ್ಥಿತಿ ತಂದೊಟ್ಟಿದೆ ಇನ್ನು ಕೆಲವರು ಮಧ್ಯಾಹ್ನದ ಬಿಸಿಲು ಇಳಿಯುವ ಸಮಯದಲ್ಲಿ ಮೇಯಿಸುವ ಕಾಯಕದಲ್ಲಿ ನಿರತರಾಗಿದ್ದಾರೆ.

ಪ್ರತಿವರ್ಷ ಮಳೆಗಾಲದಲ್ಲಿ ಕನಿಷ್ಠ ದನಕರುಗಳಿಗೆ ಮೇವಾಗುವಂತೆ ಅಲ್ಲಲ್ಲಿ ಮಳೆಯಾಗುತ್ತಿತ್ತು. ತುಂತುರು ಮಳೆ ಬಿದ್ದು ಕನಿಷ್ಠ ಸೈಕ್ಲೋನ್ ಆದರೂ ಬಂದು ಅಲ್ಲಲ್ಲಿ ಹಸಿರು ಹುಲ್ಲು ದನ, ಎಮ್ಮೆ, ಕುರಿ ಮೇಕೆಗಳಿಗೆ ಸಿಗುತ್ತಿತ್ತು. ಆದರೆ, ಈಗ ಮಳೆ ಕೊರತೆಯುಂಟಾಗಿ ಬಿಸಿಲ ಝಳ ತೀವ್ರವಾಗಿ ದನ ಕರುಗೆ ಮೇವು ಸಿಗದಂತಾಗಿದೆ.

**ಕುರಿ ಮೇಕೆಗಳು ಮೇವಿಗಾಗಿ ಪರದಾಟ:** ಕುರಿ ಸಾಕಾಣಿಕೆ ದಾರರು ಈಗ ಸಂಕಷ್ಟ ಪಡುವ ದಿನ ಎದುರಾರಿದೆ. ಅಂಕಿ ಅಂಶಗಳ ಪ್ರಕಾರ ಪರಶುರಾಂಪುರ ಹೋಬಳಿಯಲ್ಲಿ ಸು. 80379 ಕುರಿಗಳಿದ್ದು, ವಿವಿಧ ಕಡೆಗಳಲ್ಲಿ ಹೆಚ್ಚು ಕುರಿ, ಮೇಕೆ, ಸಾಕಾಣಿಕೆಗಾರರು



ಇದ್ದು, ತಮ್ಮ ಗ್ರಾಮದಲ್ಲಿ ಸಿಗುವ ಹಸಿಮೇವನ್ನು ತಿನ್ನಿಸಿ, ಸಾಕಿ ಸಲುಹಿ, ತಮ್ಮಗೆ ಹಣದ ಅವಶ್ಯಕತೆ ಇರುವಾಗ ಮಾರಾಟ ಮಾಡುತ್ತಿದ್ದರು. ಆದರೆ, ಈಗ ಬರದಿಂದ ಮೇವು ಸಿಗದಂತಾಗಿದೆ. ಕುರಿ ಹಿಂಡನ್ನು ಬೇರೆ ಬೇರೆ ಭಾಗ ಗಳಿಗೆ ಹೊಡೆದುಕೊಂಡು ಹೋಗಿ ಸಾಕುವ ಪರಿಸ್ಥಿತಿ ಬಂದಿದೆ. ನೂರಾರು ಕುರಿಗಳೊಂದಿಗೆ ಕುರಿಗಾಹಿಗಳು ಹುಲ್ಲು ಸಿಗುವ ಕಡೆಗಳಿಗೆ ಹೋಗುತ್ತಿರುವುದು ಕಂಡುಬರುತ್ತಿದೆ.

ಇದಲ್ಲದೆ 12252 ಮೇಕೆಗಳು ಹೋಬಹಿಯಲ್ಲಿದ್ದು, ಈ ಮೇಕೆಗಳನ್ನು ಬೇರೆಕಡೆ ಹೊಡೆದುಕೊಂಡು ಹೋಗಲು ಸಾಧ್ಯವಾಗದೇ ಸ್ಥಳೀಯ ವಾಗಿಯೇ ಸಿಗುವ ಸೊಪ್ಪು ಸೆದೆಗಳನ್ನು ತಿಂದು ಬದುಕುತ್ತಿದ್ದವು. ಆದರೆ, ಈಗ ಈ ಮೇಕೆಗಳಿಗೂ ಸೊಪ್ಪು ಸಿಗದ ಸ್ಥಿತಿಯಾಗಿದೆ. ಆದರಿಂದ ಕುರಿ, ಮೇಕೆಗಳು ಮೇವು ಮತ್ತು ಕುಡಿಯುವ ನೀರಿಗಾಗಿ ಪರಿತಪ್ಪಿಸುತ್ತಿವೆ.ದನ

ಬರಕ್ಕೆ ಎದುರಿ ಆರಂಭವಾದ ಗೋಶಾಲೆಗೆ ಮೊರೆ ಹೋದರೆ,ಇನ್ನು ಕೆಲವರು ಸಾಕು ಪ್ರಾಣಿಗಳನ್ನ ಮಾರಿ ಜೀವನ ನಿರ್ವಹಣೆಗೆ ನಗರಗಳ ಕಡೆ ಮುಖ ಮಾಡಿರುವ ಕುಟುಂಬಗಳನ್ನ ಕಾಣಬಹುದಾಗಿದೆ .

ಪ್ರಾಣಿ ಪಕ್ಷಿಗಳಿಗೆ ನೀರನ್ನು ಒದಗಿಸುವ ನದಿ,ಕೆರೆ-ಕಟ್ಟೆ ,ಹಳ್ಳಕೊಳ್ಳಗಳು ಭಣಗುಡುತ್ತಿಗವೆ. ಕಾರಣ ಮುಂಗಾರಿಗೆ ಸರಿಯಾಗಿ ಮಳೆ ಬರದೆ ಬರಗಾಲ ಎದುರಾಗಿದೆ. ಇದಕ್ಕೆ ಇಳೆ ಎದುರೆ ಬೆಂಡಾಗಿ ಮೊಸಳೆಯ ರೀತಿಯಲ್ಲಿ ಬಾಯಿ ತೆರೆದು ಭೂಮಿ ಮೇಲಿನ ಹಾಗು ಅಂತರ್ಜಲವನ್ನು ಬಿಡದೆ ನೀರನ್ನು ಹೀರಿಬಿಟ್ಟಿದೆ.ಆದರೆ ನೈಸರ್ಗಿಕ ಮೇವು ಹಾಗು ಕುಡಿಯೋ ನೀರನ್ನ ಸೂರ್ಯದೇವ ಟಾರ್ಗೆಟ್ ಮಾಡಿ ಮರಗಿಡಗಳು ಒಣಗಿಸಿ ಬಿಟ್ಟಿದ್ದಾನೆ. ಕುರಿ,ವೆ ೦ೀಕೆ,ದನ,ಎಮ್ಮೇ,ಮೇಕೆ,ಕುರಿಗಳು ಎಲ್ಲೋ ಹುಡಿಕಿದೆ ಹಸಿರಲೆ ಮರವನ್ನ ಎಂಬಂತೆ ಅಲ್ಲಲ್ಲಿರುವ ಮರಗಿಡಗಳ ನೆರಳಲ್ಲಿ ಮೂಕ ಪ್ರಾಣಿಗಳು ಒಟ್ಟಾಗಿ ಬಿಸಿಲಿ ದಗೆಯಿಂದ ತಪ್ಪಿಸಿಕೋಳ್ಳಲು ಆಶ್ರಯ ಪಡೆಯುವುನ್ನ ನೋಡಿ ಕುರಿಗಾಹಿಯರು ಒಂದು ಕ್ಷಣ ದೃಶ್ಯ ನೋಡಿ ಬೆರಗಾಗುವಂತೆ ಮಾಡುತ್ತಿವೆ .ಸುತ್ತಮುತ್ತಲಿನ ಬಾವಿ,ಕೋಳವೆ ಬೋರ್‌ವೆಲ್ ಸದಾ ಕುಡಿಯುವ ನೀರನ್ನಾ ಒದಗಿಸುತ್ತವೆ ಜತೆಗೆ ಅಂತರ್ಜಲ ಹೆಚ್ಚಾಗುವದು ಎಂದು ಮನಗಂಡ ಸ್ಥಳೀಯ ಶಾಸಕ ಟಿ.ರಘುಮೂರ್ತಿ ವೇದಾವತಿ ನದಿಯ ತೊರೆಯಲ್ಲಿ ಬ್ಯಾರೇಜ್ ಕಂ ಬ್ರಿಡ್ಜ್ ಜತೆ ಇನ್ನಿತರೆ ಜಲಮೂಲ ಕೆಲಸಗಳು ನಡೆದಿವೆ. ಆದರೂ ಬರಕ್ಕೆ ಅಲ್ಲಿಯೂ ನೀರು ಖಾಲಿಯಾಗಿ ಬಣಗುಡುತ್ತಿವೆ.ಬರಬಂದು ಸೂರ್ಯನ ದಗೆಯ ಅಬ್ಬರವಗಿದೆ ಈ ವರ್ಷವಾದರ ಹುಯ್ಯೋ.......ಹುಯ್ಯೋ.......ಮಳೆರಾಯ ಎಂದು ಪ್ರಾರ್ಥನೆ ಮಾಡುವ ಸ್ಥಿತಿ ವಾಸ್ತವತೆಯಾಗಿದೆ.

ರೈತ ಮಿತ್ರ ಹಾಗು ಆದಾಯ ಮೂಲವಾಗಿರುವ ಪ್ರಾಣಿ,ಪಕ್ಷಿಗಳಿಗೆ ಆಹಾರ ಒದಗಿಸುವರು ಯಾರು ಮಳೆ ಅಭಾವದಿಂದ ಬೆಳೆಗಳಿಲ್ಲದೆ ನೆಲಕಚ್ಚಿರುವ ಮನಗಂಡು ಸರಕಾರ ಪರಶುರಾಂಪುರ ಹೋಬಳಿಯ ಭಾಗದಲ್ಲಿ ಚೌಳೂರು ಗೇಟ್ ಬಳಿ ಜಾನುವಾರಗಳಿಗೆ ಗೋಶಾಲೆಗಳ ಆರಂಭಮಾಡಿದೆ.

ಹೊಲಗದ್ದೆ,ಮನೆ ಮಾಳಿಗೆಗಳಲ್ಲಿ ನೀರುಡುವಂತೆ -ಪ್ರಾಣಿ,ಪಕ್ಷಿ ಪ್ರಿಯರ ಮನವಿ.

ಪ್ರಾಣಿ ಪಕ್ಷಿಗಳು ಮಾತ್ರ ಆಹಾರಕ್ಕಾಗಿ ನರಳಾಡುತ್ತಿವೆ ಹಾಗಾಗಿ ನಾವು ನೀವೆಲ್ಲರು ಪ್ರಾಣಿ-ಪಕ್ಷಿಗಳಿಗೆ ಮನೆಯ ಮಹಡಿಯಲ್ಲಿ ನೀರನ್ನಾ,ಕೆಲವು ದಾನ್ಯಗಳನ್ನು ಬಟ್ಟಲಿನಲ್ಲಿ ಇಡುವು,ಅದೇ ರೀತಿಯಲ್ಲಿ ತಮ್ಮ ತಮ್ಮ ಹೊಲಗದ್ದೆಗಳಲ್ಲಿ ನೀರಿನ ಮಡಕೆಗಳನ್ನು ಇಡುವುದರ ಜತಗೆ ನೂರಾರು ಪಕ್ಷಿ ಪ್ರಾಣಿಗಳಿಗೆ ನೀರಿ ದಾಹನೀಗಿಸಲು ಮುಂದಾಗಬೇಕು.ಆದರೆ ಸ್ಪರ್ಧಯುಗದಲ್ಲಿ ಕೆಲ ಜನರು ಮೂಕ ಪಕ್ಷಿ ಪ್ರಾಣಿಗಳಿಗೆ ಆಹಾರ ನೀರು ನೀಡಿದರೆ ಪುಣ್ಯ ಬರುತ್ತದೆ ಎಂಬ ನಂಬಿಕೆ ಇಟ್ಟಿರುವುದು ಸತ್ಯ.ಅದರ ಜತಗೆ ಮಿಕ್ಕವರು ಸಹಾ ಬರದ ಸಿಡಿಲು ಜಾನುವಾರುಗಳ ಮೇಲೆ ತೀವ್ರವಾಗಿ ಪರಿಣಾಮ ಬೀರಿದೆ. ಕುರಿ-ಮೇಕೆಗಳನ್ನು ಸಾಕಲು ಪಡಬಾರದ ಪಾಟಲು ಬೀಳುತ್ತಿದ್ದಾರೆ. ಎಲ್ಲಿ ಹೋದರೂ ಮೇವಿಲ್ಲ, ನೀರಿಲ್ಲ. ಅಲ್ಪ ಸ್ವಲ್ಪ ಮೇವಾದರೂ ಹೊಲದಲ್ಲಿ ಬರುತ್ತದೆ ಎಂದು ನಿರೀಕ್ಷಿಸಿದ್ದವರಿಗೆ ಅದು ಇಲ್ಲದಂತಾಗಿದೆ. ಮುಂಬರುವ ದಿನಗಳಲ್ಲಿ ಬಿಸಿಲಿನ ಬೇಗೆ ಇನ್ನೂ ಹೆಚ್ಚಾದರೆ ಕುಡಿಯುವ ನೀರು, ಮೇವಿಗಾಗಿ ತೀವ್ರ ತೊಂದರೆ ಅನುಭವಿಸಬೇಕಾಗುವುದು. ಇಂತಹ ಕೆಲಸ ಕಾರ್ಯಗಳನ್ನು ಮಾಡಿದರೆ ನಿಚ್ಚಿಂತೆಯಿಂದ ಬದುಕಬಲ್ಲವು.

ಕೋಟೆ ಓಬಳಾಪುರದಲ್ಲಿ ಶ್ರೀ ಲಕ್ಷೀನರಸಿಂಹಸ್ವಾಮಿ ಜಾತ್ರಾಮಹೋತ್ಸವ.

# ಫೆ.24 ಶನಿವಾರ ಬ್ರಹ್ಮ ರಥೋತ್ಸವದ ಮೆರುಗು

» ಪರಶುರಾಂಪುರ



ಸಮೀಪದ ಕೋಟೆ ಓಬಳಾಪುರ ಗ್ರಾಮದಲ್ಲಿ ಫೆ.22ಗುರುವಾರ ದಿಂದ ಫೆ.24ರ ವರಗೆ ಅತೀ ಪುರಾತನ ಕಾಲದ ಶ್ರೀಲಕ್ಷ್ಮೀನರಸಿಂಹಸ್ವಾಮಿ ದೇವರ 14ನೇ ವರ್ಷದ ಬ್ರಹ್ಮರಥೋತ್ಸವ ಹಾಗೂ ಜಾತ್ರ ಮಹೋತ್ಸವದ ಅಂಗವಾಗಿ ಸ್ವಾಮಿಯ ರಥತೋತ್ಸವ ಜತೆ ವಿವಿಧ ಧಾರ್ಮಿಕ ಕಾರ್ಯಕ್ರಮ ನಡೆಯಲಿವೆ.

ಗುರುವಾರ ದೇವರಿಗೆ ವಿವಿಧ ಧಾರ್ಮಿಕ ಕಾರ್ಯಗಳೊಂದಿಗೆ ರಥಕ್ಕೆ ಕಳಸ ಸ್ಥಾಪನೆ ಬಳಿಕ ಗ್ರಾಮದ ಹಿರಿಯರ ಹಾಗೂ ವಿವಿಧ ಧಾರ್ಮಿಕ ಕಾರ್ಯಗಳು ಸಮ್ಮುಖದಲ್ಲಿ ರಥಾಂಗ ಹೋಮ ಮುಗಿಸಿ ನಂತರ ವಿವಿಧ ಪಟಗಳಿಂದ ಅಲಂಕಾರಗೊಂಡರಥಕ್ಕೆಭಕ್ತಾದಿಗಳು ತಮ್ಮ ದೇವರಿಗೆ ಒಪ್ಪತ್ತಿನಿಂದ ಹೂಮಾಲೆ,ಕಾಯಿ,ಕರ್ಪೂರ ನೀಡಿ ಹರಕೆಯ ವಿವಿಧ ಹೂಮಾಲೆಗಳಿಂದ ಅಲಂಕಾರಗೊಂಡ ಲಕ್ಷ್ಮೀನರಸಿಂಹಸ್ವಾಮಿಯ ರಥವನ್ನ ದೇವರ ನಾಮವನ್ನ ಜಪಿಸುತ್ತಾ ಭಕ್ತರು ಎಳೆದರು.

ಫೆ.23 ಶುಕ್ರವಾರ ಸ್ವಾಮಿಗೆ ಪಂಚಾಮೃತ ಅಭಿಷೇಕ,ದ್ವಾರಾಧನೆ,ಹೋಮ, ಕಲ್ಯಾಣೋತ್ಸವ, ಕುಂಬಾಭಿಷೇಕ, ಜರುಗುತ್ತವೆ. ಸಂಜೆ ಗ್ರಾಮದ ಈಶ್ವರ ದೇವಸ್ಥಾನದ ಬಳಿ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ಮತ್ತು ಶ್ರೀದೇವಿ,ಭೂದೇವಿ ಸಮೇತ ಉಯ್ಯಾಲೋತ್ಸವ ಕಾರ್ಯಕ್ರಮದ ಹಾಗೂ ಭಕ್ತ ಅಂಬರೀಷ ನಾಟಕ ಪ್ರದರ್ಶನದ ಜತೆ ಸಾಂಸ್ಕೃತಿಕ ಕಾರ್ಯಕ್ರಮ ಜರುಗುವುದು. ಫೆ.24ರ ಶನಿವಾರ ಬೆಳಗ್ಗೆ ಭರತ ಹುಣ್ಣಿಮೆಯ ಅಂಗವಾಗಿ ಸ್ವಾಮಿಗೆ ಪಾಮಚಾಮೃತ,ನಿತ್ಯ ಹೋಮ ಪೂರ್ಣಾಹುತಿ ಹಾಗೂ ಬ್ರಹ್ಮರಥೋತ್ಸವ ಜರುಗಿಸಲಾಗುಬವುದು. ಸಂಜೆ ವಿವಿಧ ಜನಪದ ಕಲಾತಂಡಗಳ ಮೂಲಕ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸ್ವಾಮಿಯ ಮೆರವಣಿಗೆ ಮೂಲಕ ಸ್ವಾಮಿಯನ್ನ ಶ್ರೀ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಸ್ಥಾಪಿಸಲಾಗುವುದು ದೇವಸ್ಥಾನ ಸಮಿತಿಯವರು ತಿಳಿಸಿದರು.

### ಸಿಎಂ ರೈತ ವಿದ್ಯಾನಿಧಿ: ಸಾಮಾನ್ಯ ವರ್ಗದ ವಿದ್ಯಾರ್ಥಿಗಳು ಆದಾಯ ಪ್ರಮಾಣ ಪತ್ರ ಸಲ್ಲಿಸಲು ಸೂಚನೆ

» ಚಿತ್ರದುರ್ಗ

ಮುಖ್ಯಮಂತ್ರಿ ರೈತ ವಿದ್ಯಾನಿಧಿ ಹಾಗೂ ಭೂರಹಿತ ಕೃಷಿ ಕಾರ್ಮಿಕರ ವಿದ್ಯಾನಿಧಿ ಕಾರ್ಯಕ್ರಮ ಸಂಬಂಧ 2023-24 ನೇ ಸಾಲಿಗೆ ಹೊಸದಾಗಿ ಅರ್ಜಿ ಸ್ವೀಕೃತಿಗೆ ಸಾಮಾನ್ಯ ವರ್ಗದಡಿಯಲ್ಲಿ ಬರುವ ವಿದ್ಯಾರ್ಥಿಗಳು ತಮ್ಮ ಪೋಷಕರ ಆದಾಯ ಪ್ರಮಾಣ ಪತ್ರವನ್ನು ಇದೇ ಫೆ.29ರೊಳಗೆ ರಾಜ್ಯ ವಿದ್ಯಾರ್ಥಿವೇತನ (ಎಸ್.ಎಸ್.ಪಿ) ತಂತ್ರಾಂಶ ಮೂಲಕ ವಿದ್ಯಾರ್ಥಿ ಲಾಗಿನ್‌ನಲ್ಲಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಸಾಮಾನ್ಯ ವರ್ಗದ ಪೋಷಕರ ಆದಾಯವು ರೂ. 2.50 ಲಕ್ಷ ಮೀರಿರಬಾರದು ಎಂಬ ಷರತ್ತು ವಿಧಿಸಿರುವುದರಿಂದ ಸಾಮಾನ್ಯ ವರ್ಗದಡಿ ಬರುವ ರೈತರ ಮಕ್ಕಳು ತಮ್ಮ ಪೋಷಕರ ಆದಾಯ ಪ್ರಮಾಣ ಪತ್ರವನ್ನು ಸಲ್ಲಿಸಲು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ವಿದ್ಯಾರ್ಥಿಗಳ ಲಾಗಿನ್‌ನಲ್ಲಿ ಅವಕಾಶ ಕಲ್ಪಿಸಲಾಗಿದೆ. ಫೆ.29ರೊಳಗೆ ಪ್ರಮಾಣ ಪತ್ರವನ್ನು ಅಪ್‌ಲೋಡ್ ಮಾಡುವುದು ಕಡ್ಡಾಯ.

## ಪ್ರಮುಖ ಸುದ್ದಿ

ಲೋಕಸಭಾ ಚುನಾವಣೆ ಕ್ಷಣಗಣನೆ

# ಚುನಾವಣಾಧಿಕಾರಿ ಬಿ.ಆನಂದ, ಸೆಕ್ಟರ್ ಅಧಿಕಾರಿಗಳ ಸಭೆ

» ಚಳ್ಳಕೆರೆ

ನಿರೀಕ್ಷೆಯಂತೆ 2024ರ ಲೋಕಸಭಾ ಚುನಾವಣೆಗೆ ಕ್ಷಣಗಣನೆ ಆರಂಭವಾಗಿದ್ದು, ಎಲ್ಲಾ 24 ಸೆಕ್ಟರ್ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಿ ಎಂದು ಚುನಾವಣಾಧಿಕಾರಿ ಬಿ.ಆನಂದ್ ತಿಳಿಸಿದರು.

ಅವರು ಗುರುವಾರ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಹಮ್ಮಿಕೊಂಡಿದ್ದ ಸಭೆಯಲ್ಲಿ ಮಾತನಾಡಿ,

ಚುನಾವಣಾ ಆಯೋಗ ಯಾವುದೇ ಸಂದರ್ಭದಲ್ಲಿ ಚುನಾವಣೆ ದಿನಾಂಕವನ್ನು ಪ್ರಕಟಿಸುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಈಗಾಗಲೇ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಚುನಾವಣಾ ಅಧಿಕಾರಿಗಳನ್ನು ನಿಯುಕ್ತಿ ಮಾಡಲಾಗಿದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕಾರ್ಯನಿರ್ವಹಿಸಿದ ಬಿ.ಆನಂದ್ ಲೋಕಸಭಾ ಚುನಾವಣೆಯಲ್ಲೂ ಸಹ ಈ ಕ್ಷೇತ್ರದ ಚುನಾವಣಾಧಿಕಾರಿಯಾಗಿ ನಿಯುಕ್ತಗೊಂಡಿರುವುದು ವಿಶೇಷ.



ಕ್ಷೇತ್ರದ ಒಟ್ಟು 24 ಸೆಕ್ಟರ್ ಅಧಿಕಾರಿಗಳು ಲೋಕಸಭಾ ಚುನಾವಣೆಯ ಮೊದಲ ಸಭೆಯಲ್ಲಿ ಭಾಗವಹಿಸಿ ಚುನಾವಣಾಧಿಕಾರಿಗಳಿಂದ ಹಲವಾರು ಮಾಹಿತಿಯನ್ನು ಪಡೆದರು. ಕೇಂದ್ರ ಚುನಾವಣಾ ಆಯೋಗದಂತೆ ಜಿಲ್ಲಾ ಚುನಾವಣಾಧಿಕಾರಿಗಳ ಮಾರ್ಗದರ್ಶನಂತೆ ಸಭೆ ಆಯೋಜಿಸಿದೆ. ಕ್ಷೇತ್ರದಲ್ಲಿ 24 ಅಧಿಕಾರಿಗಳು ನಿಬಾಯಿಸಬೇಕಾದ ಜವಾಬ್ದಾರಿಯುತ ಕಾರ್ಯಗಳ ಬಗ್ಗೆ ಸೂಚನೆ ನೀಡಲಾಯಿತು. 2024ರ ಲೋಕಸಭಾ ಚುನಾವಣೆಯನ್ನು ಎಲ್ಲಾ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಬೇಕಿದ್ದು, ಯಾವುದೇ ಅಹಿತಕರ ಘಟನೆ ನಡೆಯದಂತೆ ಹೆಚ್ಚು ಜಾಗ್ರತೆ ವಹಿಸಬೇಕು. ಮತಗಟ್ಟೆ ಕೇಂದ್ರಗಳ ವ್ಯಾಪ್ತಿಯಲ್ಲಿ ಮತದಾರರಿಗೆ ಸೂಕ್ತ ಮಾಹಿತಿಯನ್ನು ನೀಡಬೇಕು. ಯಾವುದೇ ಕಾರಣಕ್ಕೂ ವಾದ,ವಿವಾದಕ್ಕೆ ಅವಕಾಶವಿಲ್ಲದಂತೆ ಎಚ್ಚರಿಕೆ ವಹಿಸಿ, ಮತಗಟ್ಟೆ ಅಧಿಕಾರಿಗಳು ಸಹ ತಾವು ಸಿದ್ದಪಡಿಸಿದ ಮತದಾರರ ಗುರುತಿನ ಚೀಟಿ ವಿವರವನ್ನು ದೃಢವಾಗಿ ಇಟ್ಟುಕೊಳ್ಳಬೇಕೆಂದರು.

ತಹಶೀಲ್ದಾರ್ ರೇಹಾನ್ ಪಾಷ ಮಾತನಾಡಿ, ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮತದಾರರ ಪಟ್ಟಿಯನ್ನು ಈಗಾಗಲೇ ಪರಿಷ್ಕರಿಸಿದ್ದು, ಸದ್ಯದ ಅಂಕಿಅಂಶಕಗಳ ಪ್ರಕಾರ ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 2.23,322 ಮತದಾರರಿದ್ದಾರೆ. ಪ್ರತ್ಯೇಕವಾಗಿ ಐದು ತೃತೀಯ ಲಿಂಗಿಗಳಿದ್ದಾರೆ. ಪುರುಷ ಮತದಾರರು-1.10.800, ಮಹಿಳಾ ಮತದಾರರು-1.12.517 ಮತ ಚಲಾಯಿಸುವ ಹಕ್ಕನ್ನು ಪಡೆದಿದ್ದಾರೆಂದರು.

ಚುನಾವಣಾ ಶಿರಸ್ತೇದಾರ್ ಹಸೀನಭಾನು, ಓಬಳೇಶ್ ಕಂದಾಯಾಧಿಕಾರಿ ಲಿಂಗೇಗೌಡ, ಗ್ರಾಮ ಲೆಕ್ಕಿಗ ಪ್ರಕಾಶ್, ಸೆಕ್ಟರ್ ಅಧಿಕಾರಿಗಳಾದ ಡಾ.ರೇವಣ್ಣ, ಜೆ.ಅಶೋಕ್, ವಿರೂಪಾಕ್ಷಪ್ಪ, ಲೋಕೇಶ್, ವಿನಯ್, ರಾಜಣ್ಣ, ರಘುನಾಥ, ಮಾರುತಿಭಂಡಾರಿ, ನರೇಂದ್ರಬಾಬು, ಸಂಪತ್‌ಕುಮಾರ್ ಮುಂತಾದವರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T